# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 133 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 07–12–2023 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 133 | Title- Code: KARKAN 28269 | Chitradurga | Date: 07-12-2023 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಚಳ್ಳಕೆರೆ, ಮೊಳಕಾಲ್ಮೂರು ತಾಲ್ಲೂಕುಗಳನ್ನು 371ಜೆ ಸೇರಿಸಲು ಹೋರಾಟಗಾರ ಮನವಿ 2

ಐಇಇ ಸ್ಟಾರ್‌ರೇಟ್ ಪಂಪ್‌ಸೆಟ್ ಬಳಕೆಯಿಂದ ವಿದ್ಯುತ್ ಉಳಿತಾಯ 3

ಆರ್‌ಎಸ್‌ಎಸ್ ಕಚೇರಿ ಪ್ರವೇಶಕ್ಕೆ ನಿರಾಕರಣೆ: ಗೂಳಿಹಟ್ಟಿ ಶೇಖರ್ ಆರೋಪ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯ 06 ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಖಾಲಿ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಡಿಸೆಂಬರ್ 26 ಅರ್ಜಿ ಸಲ್ಲಿಸಲು ಕೊನೆ ದಿನವಾಗಿದೆ. ಚಿತ್ರದುರ್ಗ ತಾಲ್ಲೂಕಿನ ಮದಕರಿಪುರ, ಗೊಡಬನಾಳ್, ಚಳ್ಳಕೆರೆ ತಾಲ್ಲೂಕಿನ ಕಾಲುವೇಹಳ್ಳಿ, ಎನ್.ದೇವರಹಳ್ಳಿ, ಗೌರಸಮುದ್ರ, ಮೊಳಕಾಲ್ಮೂರು ತಾಲ್ಲೂಕಿನ ಜೆ.ಬಿ ಹಳ್ಳಿಯಲ್ಲಿ ಪ್ರತಿ ಗ್ರಾಮ ಪಂಚಾಯಿತಿಗೆ ಒಂದರಂತೆ ಒಟ್ಟು 6 ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ 06 ಹುದ್ದೆ ಖಾಲಿ ಇದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

**ಮೀಸಲಾತಿ ವಿವರ:** ಚಿತ್ರದುರ್ಗ ತಾಲ್ಲೂಕು ಮದಕರಿಪುರ ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರ (ಪರಿಶಿಷ್ಟ ಜಾತಿ–ಇತರೆ), ಗೊಡಬನಾಳ್ ಗ್ರಾಮ ಪಂಚಾಯಿತಿ (ಸಾಮಾನ್ಯ ಅಭ್ಯರ್ಥಿ–ಇತರೆ), ಚಳ್ಳಕರೆ ತಾಲ್ಲೂಕು ಕಾಲುವೇಹಳ್ಳಿ ಗ್ರಾಮ ಪಂಚಾಯಿತಿ (ಪರಿಶಿಷ್ಟ ಪಂಗಡ–ಇತರೆ, ಎನ್.ದೇವರಹಳ್ಳಿ ಗ್ರಾಮ ಪಂಚಾಯಿತಿ (ಸಾಮಾನ್ಯ ಅಭ್ಯರ್ಥಿ–ಮಹಿಳಾ ಅಭ್ಯರ್ಥಿ), ಗೌರಸಮುದ್ರ ಗ್ರಾಮ ಪಂಚಾಯಿತಿ (ಪ್ರವರ್ಗ–1–ಇತರೆ), ಮೊಳಕಾಲ್ಮುರು ತಾಲ್ಲೂಕು ಜೆ.ಬಿ.ಹಳ್ಳಿ ಗ್ರಾಮ ಪಂಚಾಯಿತಿ (ಸಾಮಾನ್ಯ ಅಭ್ಯರ್ಥಿ–ಗ್ರಾಮೀಣ ಅಭ್ಯರ್ಥಿ) ಗೆ ಮೀಸಲಾತಿ ನಿಗಧಿಪಡಿಸಲಾಗಿದೆ.

**ಅರ್ಜಿ ದೊರೆಯುವ ಸ್ಥಳ:** ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಚೇರಿ, ಜಿಲ್ಲಾ ಪಂಚಾಯತ್ ಹಾಗೂ ಸಂಬಂಧಪಟ್ಟ ತಾಲ್ಲೂಕು ಪಂಚಾಯತಿ ಮತ್ತು ಸಂಬಂಧಿಸಿದ 06 ಗ್ರಾಮ ಪಂಚಾಯಿತಿಗಳಲ್ಲಿ ಅರ್ಜಿ ಪಡೆಯಬಹುದಾಗಿದೆ.

**ಅರ್ಜಿ ಸಲ್ಲಿಸುವ ಸ್ಥಳ:** ಅರ್ಜಿಯನ್ನು ನಿಗಧಿತ ನಮೂನೆಯಲ್ಲಿ ಭರ್ತಿ ಮಾಡಿ ಅರ್ಜಿಯನ್ನು ದೃಢೀಕರಿಸಿದ ಅಗತ್ಯ ದಾಖಲೆಗಳನ್ನು ಖುದ್ದಾಗಿ ಅಥವಾ ನೊಂದಾಯಿತ ಅಂಚೆ ಮೂಲಕ "ಆಯ್ಕೆ ಸಮಿತಿ ಸದಸ್ಯ ಕಾರ್ಯದರ್ಶಿಗಳು ಹಾಗೂ ಉಪ ಕಾರ್ಯದರ್ಶಿಗಳು, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ಟೇಡಿಯಂ ರಸ್ತೆ, ಚಿತ್ರದುರ್ಗ ಈ ವಿಳಾಸಕ್ಕೆ ಮಾತ್ರ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಯನ್ನು ಜಿಲ್ಲೆಯ ವೆಬ್‌ಸೈಟ್ chitradurga.nic.in ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳಬಹುದು ಹಾಗೂ ಮಾಹಿತಿಗಾಗಿ ಖುದ್ದಾಗಿ ಕಚೇರಿ ಅವಧಿಯಲ್ಲಿ ಹಾಗೂ ದೂರವಾಣಿ ಸಂಖ್ಯೆ 08194–223058 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಟ್ಟಡ ನಿರ್ಮಾಣ ಕೆಲಸ: ಬಾಲಕನ ರಕ್ಷಣೆ



» ಚಿತ್ರದುರ್ಗ

ಪಾನ್–ಇಂಡಿಯಾ ರೆಸ್ಕ್ಯೂ ಅಂಡ್ ರಿಹ್ಯಾಬಿಲಿಟೇಶನ್ ಕ್ಯಾಂಪೈನ್ ಆಫ್ ಚೈಲ್ಡ್ ಅಂಡ್ ಅಡೋಲೆಸೆಂಟ್ ರಕ್ಷಣಾ ಕಾರ್ಯಾಚರಣೆ ಪ್ರಯುಕ್ತ ಬುಧವಾರ ಚಿತ್ರದುರ್ಗ ತಾಲ್ಲೂಕಿನ ಕುಂಚಿಗನಾಳ್ ಗ್ರಾಮ ವ್ಯಾಪ್ತಿಯಲ್ಲಿ ಹೊಸ ಕಟ್ಟಡ ನಿರ್ಮಾಣ ಹಂತದಲ್ಲಿ ಕೆಲಸ ಮಾಡುತ್ತಿದ್ದ ಓರ್ವ ಬಾಲಕಾರ್ಮಿಕನ್ನು ರಕ್ಷಿಸಿ ಮಕ್ಕಳ ಕಲ್ಯಾಣ ಸಮಿತಿಗೆ ಹಾಜರು ಪಡಿಸಲಾಯಿತು. ಬಾಲಕಾರ್ಮಿಕರನ್ನು ಕೆಲಸಕ್ಕೆ ಸೇರಿಸಿಕೊಳ್ಳದಂತೆ ಕಾರ್ಮಿಕರಿಗೆ ಹಾಗೂ ಸೈಟ್ ಇಂಜಿನಿಯರ್ ಅವರಿಗೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಎಚ್ಚರಿಕೆ ನೀಡಿದರು. ಕಟ್ಟಡ ನಿರ್ಮಾಣ ಕೆಲಸ ನಿರ್ವಹಿಸುತ್ತಿದ್ದ ಕಾರ್ಮಿಕರನ್ನು ಭೇಟಿ ಮಾಡಿ, ಅವರ ಕುಂದು ಕೊರತೆ ಆಲಿಸಿದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಅವರು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ಕಾರ್ಮಿಕರಿಗೆ ನೋಂದಣಿ ಕಾರ್ಡ್ ನೀಡುವಂತೆ ಕಾರ್ಮಿಕ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

# ಬೆಳೆವಿಮೆ ಪರಿಹಾರ ವಿತರಣೆ ಅವ್ಯವಹಾರ: ಅಧಿವೇಶನದಲ್ಲಿ ಶಾಸಕ ರಘುಮೂರ್ತಿ ಪ್ರಶ್ನೆ

» ಬೆಳಗಾವಿ

ಸುವರ್ಣವಿಧಾನಸೌಧ ಡಿ.06: ಚಳ್ಳಕೆರೆ ತಾಲ್ಲೂಕಿನಲ್ಲಿ ಬೆಳೆವಿಮೆ ಪರಿಹಾರ ವಿತರಣೆಯಲ್ಲಿ ಉಂಟಾದ ಅವ್ಯವಹಾರದ ಬಗ್ಗೆ ಶಾಸಕ ಟಿ.ರಘುಮೂರ್ತಿ ಅವರು ಬೆಳಗಾವಿಯ ಚಳಿಗಾಲದ ವಿಧಾನಸಭಾ ಅಧಿವೇಶನದಲ್ಲಿ ಕೃಷಿ ಸಚಿವರನ್ನು ಪ್ರಶ್ನಿಸಿದ್ದಾರೆ.

ಬುಧವಾರ ಶಾಸಕರ 175ನೇ ಚುಕ್ಕೇ ಗುರುತಲ್ಲದ ಪ್ರಶ್ನೆಗೆ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಲಿಖಿತವಾಗಿ ಉತ್ತರ ನೀಡಿದ್ದಾರೆ.

ಚಳ್ಳಕೆರೆ ತಾಲ್ಲೂಕಿನ ಪಿ.ಮಹಾದೇವಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 2022–23ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬೆಳೆ ವಿಮೆ ಯೋಜನೆಯಡಿ ನೋಂದಾಯಿತ ಖಾತೆದಾರರಿಗೆ ಬೆಳೆ ವಿಮೆ ಪರಿಹಾರ ನೀಡುವಲ್ಲಿ ವ್ಯತ್ಯಾಸವಾಗಿರುವ ಬಗ್ಗೆ ರೈತರು ದೂರು ನೀಡಿದ್ದಾರೆ. ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ಚಳ್ಳಕೆರೆ ತಾಲ್ಲೂಕಿನಲ್ಲಿ 68717 ಹೆಕ್ಟೇರ್ ಪ್ರದೇಶದ 14 ವಿವಿಧ ಅಧಿಸೂಚಿತ ಬೆಳೆಗೆ ಒಟ್ಟು 44852 ಬೆಳೆವಿಮೆ ನೊಂದಣಿ ಪ್ರಸ್ತಾವನೆಗಳು ನೋಂದಣಿಯಾಗಿವೆ. ಇದಲ್ಲದೆ ತಾಲ್ಲೂಕಿನ ಬೀಳು ಭೂಮಿ ಹಾಗೂ ನೋಂದಾಯಿತ ಬೆಳೆಯಲ್ಲದ ಬೇರೆ ಬೆಳೆಗಳಿಗೆ 80 ಪ್ರಕರಣಗಳಲ್ಲಿ ರೂ.67 ಲಕ್ಷೂ ಹೆಚ್ಚೂ ಬೆಳೆವಿಮೆ ಹಣ ದುರುಪಯೋಗವಾಗಿದೆ. ಮೂಲ ಖಾತೆದಾರರ ಬದಲಿಗೆ ಬೇರೆಯೊಬ್ಬರನ್ನು ನೋಂದಣಿ ಮಾಡಿಸಿದ 2 ಪ್ರಕರಣಗಳಲ್ಲಿ ರೂ.1.90 ಲಕ್ಷ ಬೆಳೆ ವಿಮೆಹಣ ಪಡೆದ ವಂಚಿಸಲಾಗಿದೆ ಈ ಕುರಿತು ಜಿಲ್ಲಾಧಿಕಾರಿ ತನಿಖಾ ವರದಿ ನೀಡಿದ್ದಾರೆ ಎಂದು ಕೃಷಿ ಸಚಿವರು ತಿಳಿಸಿದ್ದಾರೆ.

## ಜಾಜೂರು ಪೊಲೀಸ್ ಠಾಣೆ ಮೇಲ್ದರ್ಜೆಗೇರಿಸಿ



» ಬೆಳಗಾವಿ

ಚಳ್ಳಕೆರೆ ತಾಲ್ಲೂಕು ಪರುಶುರಾಂಪುರ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿನ ಜಾಜೂರು ಉಪ ಪೊಲೀಸ್ ಠಾಣೆಯನ್ನು ಮೇಲದ್ದರ್ಜೆಗೇರಿಸುವ ಕುರಿತಂತೆ ಶಾಸಕ ಟಿ.ರಘಮೂರ್ತಿ ಬೆಳಗಾವಿಯ ಚಳಿಗಾಲದ ವಿಧಾನಸಭಾ ಅಧಿವೇಶನದಲ್ಲಿ ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರಿಗೆ ಪ್ರಶ್ನಿಸಿದ್ದಾರೆ.ಜಾಜೂರು ಆಂಧ್ರ ಪ್ರದೇಶ ಗಡಿಭಾಗದಲ್ಲಿದೆ. ಇಲ್ಲಿ ಅನೇಕ ವಾಹನಗಳು ಸಂಚರಿಸುತ್ತಿದ್ದು, ರಸ್ತೆ ಅಪಘಾತ ಹಾಗೂ ಕಳ್ಳತನ ಪ್ರಮಾಣ ಹೆಚ್ಚಾಗುತ್ತಿದೆ. ಉಪಠಾಣೆಯಲ್ಲಿ ಪೊಲೀಸ್ ಸಿಬ್ಬಂದಿ ಕೊರೆತೆ ಇದೆ. ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮದ ಬಗ್ಗೆ ಚುಕ್ಕೆ ಗುರುತಲ್ಲದ ಪ್ರಶ್ನೆ ಸಂಖ್ಯೆ 77ರಲ್ಲಿ ಶಾಸಕ ಟಿ.ರಘುಮೂರ್ತಿ ಕೇಳಿದ್ದಾರೆ. ಜಾಜೂರು ಉಪಠಾಣೆ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷದಲ್ಲಿ ವಾರ್ಷಿಕವಾಗಿ ಸರಾಸರಿ 32 ಅಪಘಾತ ಮತ್ತು 126 ಅಪರಾಧ ಪ್ರಕರಣಗಳು ದಾಖಲಾಗಿವೆ. ಸದ್ಯ ಅಪಘಾತ ಹಾಗೂ ಕಳ್ಳತನ ತಡೆಗಟ್ಟಲು ಪರುಶುರಾಂಪುರ ಠಾಣೆಯಿಂದ ಅಗತ್ಯ ಪ್ರತಿಬಂಧಕ ಕ್ರಮಗಳನ್ನು ಕೈಗೊಳ್ಳಾಗುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಮಂಗಳವಾರ ಲಿಖಿತವಾಗಿ ಉತ್ತರಿಸಿದ್ದಾರೆ.

## ಎಲ್ಲಾ ಜಾತಿ, ಧರ್ಮ, ವರ್ಗದವರಿಗೂ ಸಹಾ ಸಮಾನತೆ ನೀಡಿದ ಮಹಾನ್ ವ್ಯಕ್ತಿ ಅಂಬೇಡ್ಕರ್

» ಚಿತ್ರದುರ್ಗ

5–6ನೇ ಶತಮಾನದಲ್ಲಿ ಬುದ್ಧ, 11–12ನೇ ಶತಮಾನದಲ್ಲಿ ಬಸವಣ್ಣ ಹಾಗೂ 15–16ನೇ ಶತಮಾನದಲ್ಲಿ ಕನಕದಾಸರು ಸಮಾನತೆಯನ್ನು ಸಾರಿದರುಆದರೆಡಾ.ಬಿ.ಆರ್.ಅಂಬೇಡ್ಕರ್‌ರವರು ಸಂವಿಧಾನವನ್ನು ರಚನೆ ಮಾಡುವುದರ ಮೂಲಕ ಎಲ್ಲಾ ಜಾತಿ, ಧರ್ಮ, ವರ್ಗದವರಿಗೂ ಸಹಾ ಸಮಾನತೆಯನ್ನು ನೀಡಿದ ಮಹಾನ್ ವ್ಯಕ್ತಿಯಾಗಿದ್ದಾರೆ ಕುರುವ ಸಮಾಜದ ಮುಖಂಡ ನಗರಾಭೀವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬಿ.ಟಿ.ಜಗದೀಶ್ ತಿಳಿಸಿದರು.




ಡಾ.ಬಿ.ಆರ್. ಅಂಬೇಡ್ಕರ್ ರವರ 67ನೇ ಪರಿನಿಬ್ಬಾಣ ದಿನಾಚರಣೆಯ ಅಂಗವಾಗಿ ಜಿಲ್ಲಾ ಕುರುಬರ ಸಂಘದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಅಂಬೇಡ್ಕರ್‌ರವರ ಬಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು, ಬುದ್ದ, ಬಸವಣ್ಣ ಹಾಗೂ ಕನಕದಾಸರು ಸಮಾನತೆಯ ಬಗ್ಗೆ ಕಿರ್ತನೆ, ತತ್ವ, ವಚನಗಳು ಮತ್ತು ಸಂದೇಶದ ಬಗ್ಗೆ ಮಾತ್ರ ತಿಳಿಸಿದರು. ಆದರೆ ಅಂಬೇಡ್ಕರ್ ಸಂವಿಧಾನವನ್ನು ರಚನೆ ಮಾಡುವುದರ ಮೂಲಕ ಎಲ್ಲಾ ಜನರಿಗೂ ಜಾತಿಯವರಿಗೂ ಧರ್ಮದವರಿಗೂ ಸಹಾ ನಿಜವಾದ ಅರ್ಥದಲ್ಲಿ ಸಮಾನತೆಯನ್ನು ನೀಡಿದ ಮಹಾನ್ ವ್ಯಕ್ತಿಯಾಗಿದ್ದಾರೆ ಎಂದರು.

ಅಂಬೇಡ್ಕರ್ ರವರು ತಮ್ಮ ಬದುಕಿನಲ್ಲಿ ವಿವಿಧ ರೀತಿಯಲ್ಲಿ ಕಷ್ಟಗಳನ್ನು ಅನುಭವಿಸುವುದರ ಮೂಲಕ ನನ್ನ ಜನಾಂಗದವರು ಈ ರೀತಿಯ ಕಷ್ಟಗಳನ್ನುಅನುಭವಿಸಬಾರದೆಂದುಅಭ್ಯಾಸವನ್ನು ಮಾಡುವುದರ ಮೂಲಕ ಸಂವಿಧಾನವನ್ನು ರಚನೆ ಮಾಡಿ ಎಲ್ಲರಿಗೂ ಸೌಲಭ್ಯವನ್ನು ನೀಡಿ ಸಮಾನವಾದ ಅವಕಾಶವನ್ನು ಕಲ್ಪಿಸಿಕೊಟ್ಟರು. ನಮ್ಮ ಕುರುಬ ಸಂಘದಿಂದ ಮುಂದಿನ ದಿನದಲ್ಲಿ ಎಲ್ಲಾ ದಾರ್ಶನಿಕರ ಜಯಂತಿಯನ್ನು ಆಚರಣೆ ಮಾಡುವುದರ ಮೂಲಕ ನಮ್ಮ ಸಹೋದರ ಸಮಾಜದವರಿಗೆ ಉತ್ತಮವಾದ ಸಂದೇಶವನ್ನು ನೀಡಲಾಗುವುದು ಎಂದು ಜಗದೀಶ್ ತಿಳಿಸಿದರು.

ಯಾದವ ಸಮಾಜದ ಮುಖಂಡರಾದ ಸಿ.ಟಿ.ಕೃಷ್ಣಮೂರ್ತಿ ಮಾತನಾಡಿ, ಅಂಬೇಡ್ಕರ್‌ರವರು ಸಮಾಜದಲ್ಲಿ ತುಳಿತಕ್ಕೆ ಒಳಗಾದವರಿಗೆ ನ್ಯಾಯವನ್ನು ಕೂಡಿಸುವಲ್ಲಿ ಮುಂದಾಗಿದ್ದಾರೆ. ಸಂವಿಧಾನವನ್ನು ರಚನೆ ಮಾಡುವುದರ ಮೂಲಕ ಹಕ್ಕುಗಳನ್ನು ನೀಡಿದ್ದಾರೆ. ಸಮಾನತೆಯನ್ನು ಬರೀ ಬಾಯಲ್ಲಿ ಹೇಳದೆ ಅದನ್ನು ನಿಜವಾದ ಅರ್ಥದಲ್ಲಿ ಕೊಡಿಸುವಲ್ಲಿ ಅಂಬೇಡ್ಕರ್ ಮಹತ್ತರವಾದ ಪಾತ್ರವನ್ನು ಮಾಡಿದ್ದಾರೆ. ಈ ಮಧ್ಯೆ ಮತೀಯ ಪಕ್ಷವೊಂದು ಸಂವಿಧಾನವನ್ನು ಬದಲಾವಣೆ ಮಾಡುತ್ತೇವೆ ಎಂದು ಹೊರಟ್ಟಿದೆ. ಇದರ ವಿರುದ್ದ ಹೋರಾಟವಾಗಬೇಕಿದೆ, ಅಂಬೇಡ್ಕರ್ ರವರು ರಚನೆ ಮಾಡಿದ ಸಂವಿಧಾನದ ಬಗ್ಗೆ ಸಣ್ಣದಾದ ಪುಸ್ತಕವನ್ನು ತಯಾರು ಮಾಡುವುದರ ಮೂಲಕ ಅದನ್ನು ಎಲ್ಲರಿಗೂ ಹಂಚಿ ಸಂವಿಧಾನದ ಬಗ್ಗೆ ತಿಳಿಯುವಂತೆ ಮಾಡುವುದರ ಜೊತೆಗೆ ಅದರ ಬಗ್ಗೆ ಜಾಗೃತಿಯನ್ನು ಮೂಡಿಸಬೇಕಿದೆ ಎಂದರು.

ಕುರುಬ ಸಮಾಜದ ಅಧ್ಯಕ್ಷರಾದ ಶ್ರೀರಾಮ್ ಮಾತನಾಡಿ, ಅಂಬೇಡ್ಕರ್ ರವರ ಜನ್ಮ ದಿನಾಚರಣೆ ಮತ್ತು ಪರಿನಿಬ್ಬಾಣ ದಿನವನ್ನು ನಮ್ಮ ಸಮಾಜದವತಿಯಿಂದ ಆಚರಣೆ ಮಾಡಲು ತೀರ್ಮಾನ ಮಾಡಲಾಗಿದೆ. ಇದಲ್ಲದೆ ಮಹಾನ್ ದಾರ್ಶನಕರ ಜಯಂತಿಯನ್ನು ಸಹಾ ಆಚರಣೆ ಮಾಡಲಾಗುವುದು. ಇದಕ್ಕೆ ಎಲ್ಲಾ ಸಮಾಜದವರು ಸಹಾ ಸಹಕಾರವನ್ನು ನೀಡಬೇಕಿದೆ. ಕಾಂತರಾಜ್ ವರದಿ ಶೀಘ್ರವಾಗಿ ಸರ್ಕಾರ ಬಿಡುಗಡೆ ಮಾಡಬೇಕಿದೆ, ಇದಕ್ಕೆ ನಮ್ಮ ಬೆಂಬಲ ಇದೆ. ಸರ್ಕಾರ ಯಾರ ಒತ್ತಡಕ್ಕೂ ಸಹಾ ಮಣಿಯದೆ ಇದನ್ನು ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ನಗರಸಭೆಯ ಮಾಜಿ ಅಧ್ಯಕ್ಷ ಹೆಚ್.ಮಂಜಪ್ಪ, ಮುಖಂಡರಾಧ ಮಾಲೇಶ್, ದೇವಣ್ಣ, ಪ್ರಭುದೆವ, ಮೈಲಾರಪ್ಪ, ಉಮೇಶ್, ಸುರೇಶ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ



» ಚಿತ್ರದುರ್ಗ

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್‌ರವರ 67ನೇ ಪರಿನಿರ್ವಾಣ ದಿನ ಕಾರ್ಯಕ್ರಮ ಬುಧವಾರ ನಡೆಯಿತು.ಇಲ್ಲಿನ ನಗರಸಭೆ ಹತ್ತಿರವಿರುವ ಅಂಬೇಡ್ಕರ್ ವೃತ್ತದಲ್ಲಿನ ಡಾ.ಬಿ.ಆರ್.ಅಂಬೇಡ್ಕರ್‌ರವರ ಪ್ರತಿಮೆಗೆ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದರ್ ಕುಮಾರ್ ಮೀನಾ ಅವರು ಮಾಲಾರ್ಪಣೆ, ಪುಷ್ಪಾರ್ಚನ ಮಾಡಿ, ಗೌರವ ನಮನ ಸಲ್ಲಿಸಿದರು.ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## 67ನೇ ಪರಿನಿರ್ವಾಣ ದಿನಾಚರಣೆ

» ದಾವಣಗೆರೆ



ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ರವರ 67ನೇ ಮಹಾ ಪರಿನಿರ್ವಾಣ ದಿನಾಚರಣೆಯನ್ನು ವಿವಿಧ ದಲಿತ ಪರ ಸಂಘಟನೆಗಳು ನಗರದ ಡಾ.ಬಿ,ಆರ್.ಅಂಬೇಡ್ಕರ್ ವೃತ್ತದಲ್ಲಿ ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮೂಲಕ ಆಚರಿಸಿದರು. ಇದೇ ವೇಳೆ ಮಾತನಾಡಿದ ದಲಿತ ಪರ ಸಂಘಟನೆಗಳ ಮುಖಂಡರು, ಡಿಸೆಂಬರ್ 6, 1956 ರಂದು ನಿಧನರಾದರು. ಭಾರತದಲ್ಲಿ ಅಸ್ಪೃಶ್ಯತೆಯ ನಿರ್ಮೂಲನೆಗೆ ಅವರ ನಿಲುವು ಮತ್ತು ಕೊಡುಗೆಗಳೇ ಕಾರಣ, ಅವರನ್ನು ಸಮಾಧಿ ಮಾಡಿದ ಸ್ಥಳವನ್ನು ಪವಿತ್ರವೆಂದು ಗುರುತಿಸಲಾಗಿದೆ. ಇದನ್ನು ಚೈತ್ಯ ಭೂಮಿ ಎಂದು ಕರೆಯಲಾಗುತ್ತದೆ ಎಂದು ಹೇಳಿದರು.

ಪ್ರಮುಖ ಸುದ್ದಿ

# ಶಿಕ್ಷಣ ಮತ್ತು ರಾಜಕೀಯದಿಂದ ಮಾತ್ರ ಪ್ರಗತಿ ಸಾಧ್ಯ

» ಚಿತ್ರದುರ್ಗ

ಶಿಕ್ಷಣ ಮತ್ತು ರಾಜಕೀಯದಿಂದ ಮಾತ್ರ ಪ್ರಗತಿಯನ್ನು ಸಾಧಿಸಲು ಸಾಧ್ಯವಿದೆ ಎಂಬುದನ್ನು ತೋರಿಸಿಕೊಟ್ಟ ಮಹಾನ್ ವ್ಯಕ್ತಿ ಡಾ.ಬಿ.ಆರ್.ಅಂಬೇಡ್ಕರ್ ಅವರ ನಡೆ ಮತ್ತು ನುಡಿಯನ್ನು ನಮ್ಮ ಜೀವನದಲ್ಲಿ ಅಳವಡಿಕೆ ಮಾಡಿಕೊಂಡು ನೆನಪು ಮಾಡಿಕೊಳ್ಳಬೇಕಿದೆ ಎಂದು ಕಾಂಗ್ರೆಸ್ ಎಸ್ಸಿ. ವಿಭಾಗದ ಅಧ್ಯಕ್ಷ ಜಯಣ್ಣ ಮೊಗಲಹಳ್ಳಿ ಕರೆ ನೀಡಿದರು.




ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರ 67 ನೇ ಪರಿನಿರ್ವಾಣ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಂಬೇಡ್ಕರ್ ರವರ ಹೋರಾಟ ಅರ್ಥ ಪೂರ್ಣವಾಗದೆ ಹೊರೆತು ಸಂವಿಧಾನ ನೀಡುವುದರಲ್ಲಿ ಅರ್ಥ ಇಲ್ಲ, ಸಂವಿಧಾನದ ಮೂಲಕ ಸರ್ವರಿಗೂ ಸಹಾ ಅನುಕೂಲವನ್ನು ಅಂಬೇಡ್ಕರ್ ಕಲ್ಪಿಸಿದ್ದಾರೆ. ಸಂವಿಧಾನವನ್ನು ರಚನೆ ಮಾಡುವುದರಲ್ಲಿ ನೆಹರುರವರ ತಂಡ ಪೂರ್ಣ ಪ್ರಮಾಣದ ಸಹಕಾರವನ್ನು ನೀಡಿದೆ. ಅವರನ್ನು ಸಂವಿಧಾನ ಸಮಿತಿಯ ಅಧ್ಯಕ್ಷರನ್ನಾಗಿ ಮಾಡುವುದರ ಮೂಲಕ ದೇಶಕ್ಕೆ ಉತ್ತಮವಾದ ಸಂವಿಧಾನ ರಚನೆ ಮಾಡುವುದಕ್ಕೆ ಅವಕಾಶವನ್ನು ಕಲ್ಪಿಸಿದರು ಎಂದರು.

ದೇಶಕ್ಕೆ ಸಂವಿಧಾನವನ್ನು ನೀಡುವುದರ ಮೂಲಕ ಅಂಬೇಡ್ಕರ್ ರವರು ಎಲ್ಲಾ ಜನಾಂಗಕ್ಕೆ ದೇವರಾಗಿದ್ದಾರೆ. ದೇವಾಲಯದ ಗಂಟೆ ಹೊಡೆಯುವುದಕ್ಕಿಂತ ಗ್ರಂಥಾಲಯಗಳಲ್ಲಿ ಪುಸ್ತಕವನ್ನು ಓದುವುದರ ಮೂಲಕ ನಿಮ್ಮ ಜ್ಞಾನವನ್ನು ಹೆಚ್ಚಿಸಿಕೊಳ್ಳಿ ಎಂದು ಅಂಬೇಡ್ಕರ್ ಹೇಳಿದ್ದಾರೆ ಅದರಂತೆ ನಾವುಗಳು ಮಾಡಬೇಕಿದೆ. ಇದರಿಂದ ನಮ್ಮಲ್ಲಿನ ಅಸ್ಪೃಶ್ಯತೆಯನ್ನು ಹೋಗಲಾಡಿಸಬಹುದಾಗಿದೆ. ಜ್ಞಾನವನ್ನು ಸಂಪಾದಿಸಿದಾಗ ಮಾತ್ರ ಬೇರೆಯವರೊಂದಿಗೆ ಮಾತನಾಡಲು ಸಾಧ್ಯವಿದೆ. ಈ ಮಧ್ಯೆ ಬಿಜೆಪಿಯವರು ಸಂವಿಧಾನವನ್ನು ಬದಲಾವಣೆ ಮಾಡಲು ಮುಂದಾಗಿದ್ದಾರೆ.


ಪುಟ ↘ 2

## ಫಾಸ್ಟ್ ನ್ಯೂಸ್



ಹೊಳಲ್ಕೆರೆ ತಾಲೂಕು. ಉಪ್ಪರಿಗೆನಹಳ್ಳಿ. ಗ್ರಾಮದಲ್ಲಿ ಶ್ರೀ ಕೊಲ್ಲಾಪುರದ ಮಹಾಲಕ್ಷ್ಮಿ. ಕಾರ್ತಿಕ ಮಹೋತ್ಸವ ಆಚರಿಸಲಾಯಿತು.

### ಸಿಂಕ್ಲರ್‌ಸೆಟ್‌ಗೆ ಅರ್ಜಿ ಆಹ್ವಾನ

» ನಾಯಕನಹಟ್ಟಿ

ಅತೀ ಕಡಿಮೆ ನೀರಿನಲ್ಲಿ ತುಂತುರು ನೀರು ಅಳವಡಿಸಿಕೊಂಡು ಹೆಚ್ಚು ಹಿಳುವರಿ ಪಡೆಯಲು ಹನಿ ನೀರಾವರಿ ಯೋಜನೆಗೆ ಅತ್ಯವಶ್ಯಕತೆಗೆ ಅನುಕೂವಾಗಿರುತ್ತದೆ. ಆದ್ದರಿಂದ ನಾಯಕನಹಟ್ಟಿಯ ಕೃಷಿ ಇಲಾಖೆಯಿಂದ ಅರ್ಜಿ ಕರೆಯಲಾಗಿದ್ದು ಅರ್ಹ ರೈತರು



ಈ ಯೋಜನೆಯನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ನಾಯಕನಹಟ್ಟಿ ಕೃಷಿ ಅಧಿಕಾರಿ ಹೇಮಂತ್‌ನಾಯ್ಕ ತಿಳಿಸಿದ್ದಾರೆ.ಪಟ್ಟಣದ ರೈತ ಸಂಪರ್ಕ ಕೇಂದ್ರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ರೈತರು 2023–24ನೇ ಸಾಲಿನ ಸೂಕ್ಷ್ಮ ನೀರಾವರಿ ಯೋಜನೆಯಡಿ ಕೃಷಿ ಇಲಾಖೆಯ ವತಿಯಿಂದ ತುಂತುರು ನೀರಾವರಿ ಘಟಕ ಸ್ಪಿಂಕ್ಲರ್ ವಿತರಣೆಗಾಗಿ ಅರ್ಜಿ ಅಹ್ವಾನಿಸಲಾಗಿದೆ. ಆಸಕ್ತ ರೈತರು ಅರ್ಜಿ ಫಾರಂನೊಂದಿಗೆ ಆಧಾರ್ ಕಾರ್ಡ್, ಎಫ್‌ಐಡಿ ಜೆರಾಕ್ಸ್, ಪಹಣಿ ಜೆರಾಕ್ಸ್, ನೀರಾವರಿ ಮೂಲದ ದೃಢೀಕರಣ ಪತ್ರ ಬ್ಯಾಂಕ್ ಪಾಸ್‌ಪುಸ್ತಕದ ನಕಲು ಪ್ರತಿ, ಹಾಗೂ ಮೂರು ಫೋಟೋಗಳೊಂದಿಗೆ ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರಕ್ಕೆ ಸಂಪರ್ಕಿಸಿ ಕೂಡಲೇ ಅರ್ಜಿ ಹಾಕಬೇಕು ಎಂದು ಅವರು ವಿನಂತಿಸಿದರು.ಸೂಕ್ಷ್ಮ ನೀರಾವರಿ ಯೋಜನೆಯಡಿ ಸಿಂಕ್ಲರ್‌ಸೆಟ್ ವಿತರಣೆಯ ವಿವರ ರೈತರ ವಂತಿಕೆ ಸಹಾಯ ಧನ ಒಟ್ಟು ಮೊತ್ತ ರೂಗಳಲ್ಲಿ, ಎರಡುವರೆ ಇಂಚಿನ ಮೂವತ್ತು ಪೈಪ್, 5 ತುಂತುರು ಹನಿ ಜೆಟ್ ಸೇರಿ 26,442/– ರೂ. ರೈತರ ವಂತಿಗೆ 4,667/– ಸಹಾಯ ಧನ 21,775/– ರೂ. ಹೆಚ್ಚಿನ ಮಾಹಿತಿಗಾಗಿ ಅಗತ್ಯ ದಾಖಲೆಗಳೊಂದಿಗೆ ನಾಯಕನಹಟ್ಟಿ ರೈತ ಸಂಪರ್ಕ ಕೇಂದ್ರಗಳಿಗೆ ಬೇಟಿ ನೀಡಿ ಅರ್ಜಿ ಸಲ್ಲಿಸುವಂತೆ ನಾಯಕನಹಟ್ಟಿ ಕೃಷಿ ಅಧಿಕಾರಿ ಹೇಮಂತ್‌ನಾಯ್ಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಡಿ. 8 ರಿಂದ ವಿಶ್ವ ಹೃದಯ ಸಮ್ಮೇಳನ

» ಹೊಸದುರ್ಗ

ಬೆಂಗಳೂರಿನ ಋಷಿ ಸಂಸ್ಕೃತಿ ವಿದ್ಯಾ ಕೇಂದ್ರ ಹಾಗೂ ಹೊಸದುರ್ಗ ಸದ್ಗುರು ಸೇವಾಶ್ರಮದ ವತಿಯಿಂದ ಡಿ. 8 ರಿಂದ ಮೂರು ದಿನಗಳ ಕಾಲ 'ವಿಶ್ವ ಹೃದಯ ಸಮ್ಮೇಳನ' ಪಟ್ಟಣದ ಸದ್ಗುರು ಸೇವಾಶ್ರಮದಲ್ಲಿ ನಡೆಯಲಿದೆ ಎಂದು ಸದ್ಗುರು ಸೇವಾಶ್ರಮ ಟ್ರಸ್ಟ್ ಅಧ್ಯಕ್ಷ ಬಿ.ವಿ. ಲವಕುಮಾರ್ ತಿಳಿಸಿದರು. ಪಟ್ಟಣದ ಸದ್ಗುರು ಸೇವಾಶ್ರಮದಲ್ಲಿ ಆಯೋಜಿಸಲಾಗಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.ಸಿದ್ಧ ಸಮಾಧಿ ಯೋಗದ ಸಂಸ್ಥಾಪಕ ಪ್ರಭಾಕರ್ ಜಿ, ರಮಾದೇವಿ, ಸದ್ಗುರು ಸೇವಾಶ್ರಮ ಸಂಸ್ಥಾಪಕ ಕಾಂತಾನಂದ ಭಗವಾನ್ ಸರಸ್ವತಿ ಮಹಾರಾಜ್ ನೇತೃತ್ವದಲ್ಲಿ ಸಮ್ಮೇಳನ ನಡೆಯಲಿದೆ. ಡಿ.8 ರಂದು ಗಣಪತಿ ಹೋಮ, ಭಜನಾ, ಧಾರ್ಮಿಕ ಕಾರ್ಯಕ್ರಮ ನಡೆಯಲಿದೆ. ಮೈಸೂರಿನ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ದೊಡ್ಡೇರಿಯ ಸತ್ ಉಪಾಸಿ ಸದ್ಗುರು, ಶಿವಮೊಗ್ಗದ ಬ್ರಹ್ಮಾನಂದತೀರ್ಥ ಭಿಕ್ಷು, ಶಿವಮೊಗ್ಗ ರಾಮಕೃಷ್ಣ ವಿವೇಕಾನಂದ ಆಶ್ರಮದ ವಿನಯಾನಂದ ಸರಸ್ವತಿಗಳು, ಹಿರಿಯೂರು ದತ್ತಾಶ್ರಮದ ಸುಭೋಧಾನಂದ ಸ್ವಾಮೀಜಿ, ಬೆಲಗೂರಿನ ಮಾರುತಿ ಪೀಠದ ವಿಜಯ ಮಾರುತಿ ಶರ್ಮ ಸ್ವಾಮೀಜಿ, ಹರಿಹರದ ವಚನಾನಂದ ಸ್ವಾಮೀಜಿ, ಮಂತ್ರಾಲಯದ ರಾಘವೇಂದ್ರ ಸ್ವಾಮಿ ಮಠದ ಸುಬುಧೇಂದ್ರ ಪಾದಂಗಳ ಸ್ವಾಮೀಜಿ, ಆದಿಚುಂಚನಗಿರಿ ಮಠದ ನಿರ್ಮಲಾನಂದನಾಥ ಸ್ವಾಮೀಜಿ, ಹಾಸನದ ಪ್ರವೀಣ್ ಗುರೂಜಿ, ಬೆಂಗಳೂರಿನ ಶ್ರೀಕಂಠೇಶ್ವರ ಸ್ವಾಮೀಜಿ, ಪೇಜಾವರ ಅಧೋಕ್ಷಜ ಮಠದ ವಿಶ್ವಪ್ರಸನ್ನ ತೀರ್ಥ ಪಾದಂಗಳ ಸ್ವಾಮೀಜಿ, ಹೊರನಾಡಿನ ಭೀಮೇಶ್ವರ ಜೋಶಿ, ಗೌರಿಗದ್ದೆ ವಿನಯ್ ಅವಧೂತರು ಭಾಗವಹಿಸಿ, ಆಶೀರ್ವಚನ ನೀಡುವರು. ವಿಶ್ವದಲ್ಲಿರುವವರೆಲ್ಲಾ ಹೃದಯದಲ್ಲಿ ಸೇರಿ, ಪ್ರೀತಿ ಪ್ರೇಮ ವಿಶ್ವಾಸದಿಂದ ಇರಬೇಕು. ಹಲವು ಸ್ವಾಮೀಜಿಗಳು ಇದೇ ಮೊದಲ ಬಾರಿಗೆ ಪಟ್ಟಣಕ್ಕೆ ಆಗಮಿಸುತ್ತಿದ್ದು, ಸರ್ವರೂ ಭಾಗವಹಿಸಿ, ಶ್ರೀಗಳಿಂದ ಆಶೀರ್ವಚನ ಪಡೆಯಬಹುದು ಎಂದು ಹೇಳಿದರು.

### ಪಿಸಿ&ಪಿಎನ್‌ಡಿಟಿ ಜಿಲ್ಲಾ ಸಲಹಾ ಸಮಿತಿ ಸಭೆಯಲ್ಲಿ ಡಿಹೆಚ್‌ಒ ಡಾ.ಜಿ.ಪಿ.ರೇಣುಪ್ರಸಾದ್ ಮಾಹಿತಿ

# ಸ್ಕ್ಯಾನಿಂಗ್ ವೈದ್ಯರಿಗೆ 2 ಸೆಂಟರ್‌ಗೆ ಅವಕಾಶ

» ಚಿತ್ರದುರ್ಗ

ಪಿ.ಸಿ. ಅಂಡ್ ಪಿ.ಎನ್.ಡಿ.ಟಿ. ಕಾಯ್ದೆ (ಗರ್ಭ ಪೂರ್ವ ಮತ್ತು ಪ್ರಸವಪೂರ್ವ ಭ್ರೂಣ ಲಿಂಗ ಪತ್ತೆ ತಡೆ ಕಾಯ್ದೆ) ಯನ್ವಯ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಸೆಂಟರ್‌ಗಳಲ್ಲಿ ಸ್ಕ್ಯಾನಿಂಗ್ ಕಾರ್ಯನಿರ್ವಹಿಸುತ್ತಿರುವ ವೈದ್ಯರು ಜಿಲ್ಲೆಯಲ್ಲಿನ ಎರಡು ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಮಾತ್ರ ಸೇವೆ ನೀಡಲು ಅವಕಾಶವಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ತಿಳಿಸಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಪಿಸಿ & ಪಿಎನ್‌ಡಿಟಿ ಜಿಲ್ಲಾ ಸಲಹಾ ಸಮಿತಿ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಕಾರ್ಯ ನಿರ್ವಹಿಸುವ ವೈದ್ಯರು ಜಿಲ್ಲೆಯಲ್ಲಿನ ಎರಡು ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಮಾತ್ರ ಸೇವೆ ನೀಡಲು ಅವಕಾಶವಿದೆ ಹಾಗೂ ವೈದ್ಯರು ಭೇಟಿ ನೀಡುವ ಸ್ಕ್ಯಾನಿಂಗ್ ಸೆಂಟರ್ ಹಾಗೂ ಭೇಟಿ ಸಮಯವನ್ನು ಕಡ್ಡಾಯವಾಗಿ ಎಂಪ್ಯಾನಲ್ ಮಾಡಿಸಬೇಕು ಎಂದು ಈಗಾಗಲೆ ಇಲಾಖೆಯು ಸುತ್ತೋಲೆ ಮೂಲಕ ಸ್ಪಷ್ಟನೆ ನೀಡಿದೆ. ಈ ಬಗ್ಗೆ ಎಲ್ಲ ವೈದ್ಯರಿಗೆ ಹಾಗೂ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಹಾಗೂ ಆಸ್ಪತ್ರೆಗಳಿಗೆ ಸ್ಪಷ್ಟ ಮಾಹಿತಿ ನೀಡುವಂತೆ ತಿಳಿಸಿದರು. ವೈದ್ಯರು ಜಿಲ್ಲೆಯಲ್ಲಿ ಗರಿಷ್ಠ 02 ಸ್ಕ್ಯಾನಿಂಗ್ ಸೆಂಟರ್ ಗಳಿಗೆ ಮಾತ್ರ ಭೇಟಿ ನೀಡಿ ಕಾರ್ಯ ನಿರ್ವಹಿಸಲು ಅವಕಾಶವಿದೆ ಎಂಬುದಾಗಿ ಸುತ್ತೋಲೆಯಲ್ಲಿ ತಿಳಿಸಲಾಗಿದ್ದು, ಅನ್ಯ ಜಿಲ್ಲೆಗೆ ತೆರಳಿ ಸೇವೆ ನೀಡುವ ಕುರಿತಂತೆ ಸುತ್ತೋಲೆಯಲ್ಲಿ ಗೊಂದಲವಿದೆ. ಹೀಗಾಗಿ ಈ ಬಗ್ಗೆ ಇಲಾಖೆಯಿಂದ ಸ್ಪಷ್ಟನೆ ಪಡೆಯುವುದು ಸೂಕ್ತ ಎಂಬುದಾಗಿ ಸಲಹಾ ಸಮಿತಿ ಸದಸ್ಯರು ಅಭಿಪ್ರಾಯಪಟ್ಟರು.



ಲಿಂಗಾನುಪಾತ ಕುಸಿತಕ್ಕೆ ಆತಂಕ : ಜಿಲ್ಲೆಯಲ್ಲಿ ಕಳೆದ ವರ್ಷ ಲಿಂಗಾನುಪಾತ 967 ದಾಖಲಾಗಿತ್ತು. ಅಂದರೆ 1000 ಗಂಡು ಮಕ್ಕಳಿಗೆ 967 ಹೆಣ್ಣು ಮಕ್ಕಳ ಜನನವಾಗಿದೆ. ಆದರೆ ಈ ವರ್ಷ ಅಕ್ಟೋಬರ್ ಅಂತ್ಯದವರೆಗೆ 5602–ಗಂಡು, 5292–ಹೆಣ್ಣು ಮಕ್ಕಳ ಜನನವಾಗಿದ್ದು, ಲಿಂಗಾನುಪಾತ 945 ದಾಖಲಾಗಿದೆ. ಇದು ಅತ್ಯಂತ ಗಂಭೀರ ವಿಷಯವಾಗಿದೆ. ಮೊಳಕಾಲ್ಮೂರು ತಾಲ್ಲೂಕಿನಲ್ಲಿ ಲಿಂಗಾನುಪಾತ ಉತ್ತಮವಾಗಿದ್ದು, ಇಲ್ಲಿ ಗಂಡುಮಕ್ಕಳಿಗಿಂತ ಹೆಣ್ಣು ಮಕ್ಕಳ ಜನನವೇ ಹೆಚ್ಚಿದೆ, ಇಲ್ಲಿ ಲಿಂಗಾನುಪಾತ–1100 ದಾಖಲಾಗಿದೆ. ಚಳ್ಳಕೆರೆ–989, ಚಿತ್ರದುರ್ಗ–968, ಹೊಳಲ್ಕೆರೆ–921 ದಾಖಲಾಗಿದ್ದರೆ, ಹೊಸದುರ್ಗ ತಾಲ್ಲೂಕಿನಲ್ಲಿ ಅತ್ಯಂತ ಕನಿಷ್ಟ 866 ಲಿಂಗಾನುಪಾತ ದಾಖಲಾಗಿದೆ. ಇಲ್ಲಿ 411 ಗಂಡುಮಕ್ಕಳು, 356 ಹೆಣ್ಣು ಮಕ್ಕಳ ಜನನವಾಗಿದೆ. ಕಳೆದ ವರ್ಷಕ್ಕೆ ಹೋಲಿಸಿದಾಗ ಲಿಂಗಾನುಪಾತ ವ್ಯತ್ಯಾಸ ಹೆಚ್ಚಾಗಿದೆ. ಈ ಬಗ್ಗೆ ಆತಂಕ ವ್ಯಕ್ತಪಡಿಸಿದ ಸಮಿತಿಯ ಸದಸ್ಯ ಡಾ. ಸತ್ಯನಾರಾಯಣ ಅವರು, ಪ್ರಸವಪೂರ್ವ ಲಿಂಗಪತ್ತೆಯು ಶಿಕ್ಷಾರ್ಹ ಅಪರಾಧವಾಗಿದೆ, ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ದಿಢೀರ್ ದಾಳಿ ನಡೆಸಿ ಪರಿಶೀಲನೆ ನಡೆಸುವುದು ಅಗತ್ಯವಾಗಿದೆ ಎಂದರು.

ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ದಿಡೀರ್ ದಾಳಿ ನಡೆಸಿ: ಮಂಡ್ಯ ಜಿಲ್ಲೆಯಲ್ಲಿ ಇತ್ತೀಚೆಗೆ ಕೇಳಿಬಂದ ಹೆಣ್ಣು ಭ್ರೂಣ ಹತ್ಯೆ ಪ್ರಕರಣ ಕುರಿತಂತೆ ಸಮಿತಿ ಸದಸ್ಯರು ತೀವ್ರ ಆತಂಕ ವ್ಯಕ್ತಪಡಿಸಿ, ಈ ಕುರಿತಂತೆ ಜಿಲ್ಲೆಯಲ್ಲಿಯೂ ಸಮಿತಿಯು ತೀವ್ರ ಕಟ್ಟೆಚ್ಚರ ವಹಿಸಬೇಕಿದೆ. ಸ್ಕ್ಯಾನಿಂಗ್ ಸೆಂಟರ್ ಹಾಗೂ ಆಸ್ಪತ್ರೆಗಳ ಕಾರ್ಯ ನಿರ್ವಹಣೆ ಬಗ್ಗೆಯೂ ತೀವ್ರ ನಿಗಾ ವಹಿಸುವುದು ಅಗತ್ಯವಿದೆ ಎಂದು ಸಮಿತಿಯ ಸರ್ವ ಸದಸ್ಯರು ಅಭಿಪ್ರಾಯಪಟ್ಟರು. ಸಮಿತಿ ಸದಸ್ಯ ಡಾ. ಸತ್ಯನಾರಾಯಣ ಅವರು ಪ್ರತಿಕ್ರಿಯಿಸಿ, ಪಿಸಿ & ಪಿಎನ್‌ಡಿಟಿ ಕಾಯ್ದೆ ಅನ್ವಯ ಜಿಲ್ಲಾ ಪರಿಶೀಲನಾ ಮತ್ತು ತಪಾಸಣಾ ಸಮಿತಿಯು ಕನಿಷ್ಟ 03 ತಿಂಗಳಿಗೊಮ್ಮೆಯಾದರೂ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲಿಸಬೇಕು, ಈ ಕ್ರಮ ಜಿಲ್ಲೆಯಲ್ಲಿ ಸಮರ್ಪಕವಾಗಿ ಜಾರಿಯಾಗಿಲ್ಲ, ಈಗಲಾದರೂ ಸಮಿತಿಯ ತಂಡವು ಜಿಲ್ಲೆಯಲ್ಲಿನ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲಿಸುವ ಕಾರ್ಯ ಆಗಬೇಕು ಎಂದರು. ಇದಕ್ಕೆ ಸಮ್ಮತಿ ವ್ಯಕ್ತಪಡಿಸಿದ ಡಿಹೆಚ್‌ಒ ಡಾ. ರೇಣುಪ್ರಸಾದ್ ಅವರು, ಶೀಘ್ರದಲ್ಲಿಯೇ ಜಿಲ್ಲೆಯಲ್ಲಿರುವ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ದಿಢೀರ್ ಭೇಟಿ ನೀಡಿ, ಅಲ್ಲಿನ ಕಾರ್ಯವೈಖರಿ, ದಾಖಲೆಗಳ ನಿರ್ವಹಣೆ, ಬಾಲಿಕಾ ತಂತ್ರಾಂಶ ನಮೂದು, ಕಾಯ್ದೆಯ ಸಂಪೂರ್ಣ ನಿರ್ದೇಶನಗಳ ಪಾಲನೆ ಕುರಿತಂತೆ ಪರಿಶೀಲಿಸುವುದು ಎಂದರು. ಇದಕ್ಕೆ ಸಲಹಾ ಸಮಿತಿಯ ಅಧ್ಯಕ್ಷೆ ಡಾ. ಸೌಮ್ಯ, ಕಾನೂನು ಸಲಹೆಗಾರ ವಕೀಲ ಉಮೇಶ್ ಸೇರಿದಂತೆ ಸಮಿತಿಯ ಎಲ್ಲ ಸದಸ್ಯರು ಕೂಡ ದನಿಗೂಡಿಸಿ, ಪ್ರಸ್ತುತ ಇದು ಅತ್ಯಂತ ಅವಶ್ಯವಾಗಿದೆ ಎಂದು ಸಲಹೆ ನೀಡಿದರು.

72 ಸ್ಕ್ಯಾನಿಂಗ್ ಸೆಂಟರ್‌ಗಳ ಪರಿಶೀಲನೆ : ಜಿಲ್ಲೆಯಲ್ಲಿ 12 ಸರ್ಕಾರಿ ಹಾಗೂ 60 ಖಾಸಗಿ ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 72 ಸ್ಕ್ಯಾನಿಂಗ್ ಸೆಂಟರ್‌ಗಳಿದ್ದು, ಈ ಎಲ್ಲಾ ಸೆಂಟರ್‌ಗಳು ಕಾರ್ಯನಿರ್ವಹಿಸುತ್ತಿವೆ. ಪಿ.ಸಿ.ಪಿ.ಎನ್.ಡಿ.ಟಿ ಕಾಯ್ದೆಯಲ್ಲಿ ಸ್ಕ್ಯಾನಿಂಗ್ ಸೆಂಟರ್ ಯಾವ ರೀತಿ ಇರಬೇಕು, ಯಾವ ದಾಖಲೆಗಳು ನಿರ್ವಹಣೆ ಮಾಡಬೇಕು ಇತ್ಯಾದಿ ಅಂಶಗಳನ್ನು ಭೇಟಿ ವೇಳೆ ಪರಿಶೀಲಿಸಿ, ಕಾಯ್ದೆ ಉಲ್ಲಂಘಿಸುವವರ ವಿರುದ್ಧ ಕ್ರಮವಹಿಸಲಾಗುವುದು ಎಂದು ಡಿಹೆಚ್‌ಒ ಡಾ. ರೇಣುಪ್ರಸಾದ್ ಹೇಳಿದರು.

ಪಿ.ಸಿ.& ಪಿ.ಎನ್.ಡಿ.ಟಿ ಅಡಿಯಲ್ಲಿ ಹೊಸ ಸ್ಕ್ಯಾನಿಂಗ್ ಸೆಂಟರ್ ಪ್ರಾರಂಭಕ್ಕೆ ಆನ್‌ಲೈನ್‌ನಲ್ಲಿ ನೋಂದಣಿಗಾಗಿ 4 ಮತ್ತು ರಿನಿವಲ್‌ಗಾಗಿ 1 ಅರ್ಜಿ ಸೇರಿದಂತೆ ಒಟ್ಟು 5 ಅರ್ಜಿಗಳು ಬಂದಿವೆ. ಪಿಸಿ&ಪಿಎನ್‌ಡಿಟಿ ಕಾಯ್ದೆಯ ಬಗ್ಗೆ ಜಾಗೃತಿ ಮೂಡಿಸಲು ಜಿಲ್ಲಾ ಮಟ್ಟಕ್ಕೆ ಹಾಗೂ ತಾಲ್ಲೂಕು ಮಟ್ಟದ ಕಾರ್ಯಗಾರಕ್ಕೆ ತಲಾ 50 ಸಾವಿರ ರೂ. ಎರಡು ಕಾರ್ಯಕ್ರಮಗಳಿಗೆ ಹಾಗೂ ಮೊಬಿಲಿಟಿ ಸಪೋರ್ಟ್‌ಗಾಗಿ ರೂ.50 ಸಾವಿರ ಬಿಡುಗಡೆಯಾಗಿದೆ ಎಂದು ವಿಷಯ ನಿರ್ವಾಹಕರು ಸಭೆಯ ಗಮನಕ್ಕೆ ತಂದರು.

ಪಿ.ಸಿ.ಪಿ.ಎನ್.ಡಿ.ಟಿ ಕಾಯ್ದೆಯ ಪರಿಣಾಮಕಾರಿ ಅನುಷ್ಠಾನಗೊಳಿಸಲು ಹಾಗೂ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಮಾಹಿತಿ ಶಿಕ್ಷಣ ಸಂವಹನ (ಐ.ಇ.ಸಿ) ಚಟುವಟಿಕೆಗಾಗಿ ಹೋರ್ಡಿಂಗ್ಸ್ ಮತ್ತು ಪೋಸ್ಟರ್‌ಗಳನ್ನು ಮಾಡಿಸಲು ಸಭೆಯು ಅನುಮತಿ ನೀಡಿತು.

ಸಭೆಯಲ್ಲಿ ಜಿಲ್ಲಾ ಪಿ.ಸಿ. & ಪಿ.ಎನ್.ಡಿ.ಟಿ ಸಲಹಾ ಸಮಿತಿ ಅಧ್ಯಕ್ಷೆ ಡಾ.ಎಸ್.ಸೌಮ್ಯ, ಸದಸ್ಯರಾದ ಡಾ.ಸತ್ಯನಾರಾಯಣ, ವಕೀಲ ಎಂ.ಉಮೇಶ್, ಗಾಯತ್ರಿ ಶಿವರಾಂ, ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಇದ್ದರು.

# ಚಳ್ಳಕೆರೆ, ಮೊಳಕಾಲ್ಮೂರು ತಾಲ್ಲೂಕುಗಳನ್ನು 371ಜೆ ಸೇರಿಸಲು ಶಾಸಕರಿಗೆ ಹೋರಾಟಗಾರ ಮನವಿ

» ನಾಯಕನಹಟ್ಟಿ

ಚಿತ್ರದುರ್ಗ ಜಿಲ್ಲೆಯ ಅತಿ ಹಿಂದುಳಿದ ತಾಲ್ಲೂಕುಗಳಾದ ಚಳ್ಳಕೆರೆ, ಮೊಳಕಾಲ್ಮೂರು ತಾಲ್ಲೂಕುಗಳನ್ನು ಸಂವಿಧಾನದ ಆರ್ಟಿಕಲ್ 371ಜೆ ಹೈದರಾಬಾದ್ ಕರ್ನಾಟಕಕ್ಕೆ ಈ 2 ತಾಲ್ಲೂಕುಗಳನ್ನು ಸೇರಿಸುವಂತೆ ಸರ್ಕಾರದ ಮಟ್ಟದಲ್ಲಿ ಕ್ರಮಕೈಕೊಳ್ಳುವಂತೆ ಮನವಿಮಾಡುತ್ತಿದ್ದೇವೆ ಎಂದು ನೀರಾವರಿ ಮತ್ತು ಸಾಮಾಜಿಕ ಹೋರಾಟ ಸಮಿತಿ ಅಧ್ಯಕ್ಷರು, ಸದಸ್ಯರುಗಳ ವತಿಯಿಂದ ಮೊಳಕಾಲ್ಮೂರು ಶಾಸಕ ಎನ್.ವೈ.ಗೋಪಾಲಕೃಷ್ಣ, ಚಳ್ಳಕೆರೆ ಶಾಸಕ ರಘುಮೂರ್ತಿರವರಿಗೆ ಮನವಿ ಮಾಡಿಕೊಂಡರು.

ನಾಯಕನಹಟ್ಟಿ ಮತ್ತು ತಳಕು ಹೋಬಳಿಯ ಕಾಂಗ್ರೆಸ್ ಕಾರ್ಯಕರ್ತರು ಇಬ್ಬರು ಶಾಸಕರುಗಳಿಗೆ ಸನ್ಮಾನಿಸಿದರು.

ಹೋಬಳಿಯ ರಾಜ್ಯ ಪ್ರಸಿದ್ಧ ಶ್ರೀ ಗುರು ತಿಪ್ಪೇರುದ್ರಸ್ವಾಮಿ ಪುಣ್ಯಕ್ಷೇತ್ರವಾಗಿದ್ದು ಇಲ್ಲಿಗೆ ಪ್ರತಿನಿತ್ಯ ಸಾವಿರಾರು ಸಂಖ್ಯೆಯಲ್ಲಿ ರಾಜ್ಯದ ವಿವಿಧ ಭಾಗಗಳಿಂದ, ಹೊರ ರಾಜ್ಯಗಳಿಂದ ಆಗಮಿಸುತ್ತಿದ್ದಾರೆ ಆದ್ದರಿಂದ ನಾಯಕನಹಟ್ಟಿಯ ದೊಡ್ಡಕೆರೆ ಮತ್ತು ಚಿಕ್ಕಕೆರೆ ನೀರು ಹರಿಸಬೇಕೆಂದು ಮನವಿ ಮಾಡಿಕೊಂಡರು.

ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ಈ ಭಾಗದಲ್ಲಿ ಹೆಚ್ಚಿನ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಹಿಂದುಳಿದ ಜನಾಂಗದವರೆ ಹೆಚ್ಚಾಗಿದ್ದು, ನೀರಾವರಿ ಸೌಲಭ್ಯಗಳಿಂದ ಹೆಚ್ಚಿನ ಜನರು



ಬೇರೆಬೇರೆ ಪ್ರದೇಶಗಳಿಗೆ ಗೂಳೆ ಹೋಗುತ್ತಿದ್ದಾರೆ. ಆದ್ದರಿಂದ ಇರುವಂತಹ ಕೊಳವೆ ಬಾವಿಗಳಿಗೆ ಅಂತರ್ಜಲ ಸಮಸ್ಯೆ ಹೆಚ್ಚಾಗುತ್ತಿದೆ. ಈ ಮೇಲಿನ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ಮಾರ್ಗವೆಂದರೆ ನೀರಾವರಿ ಸೌಲಭ್ಯ ಹೆಚ್ಚಿಸಬೇಕೆಂದು ತಿಳಿಸಿದರು. ಈ ಭದ್ರ ಮೇಲ್ದಂಡೆ ಯೋಜನೆ ಕಾಮಗಾರಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳುವಂತೆ ಮನವಿ ಮಾಡಿಕೊಂಡರು. ನಾಯಕನಹಟ್ಟಿಯ ಹಿರೆಕೆರೆಗೆ ನೀರು ಬರುವಂತಹ ವ್ಯವಸ್ಥೆ ಸಿಡ್ಲಾ ಹಳ್ಳದಿಂದ 1976–77ನೇ ಸಾಲಿನ ಅಂದಿನ ಶಾಸಕರಾಗಿದ್ದ ಪಟೇಲ್ ಪಾಪನಾಯಕರವರು ಕಾಲುವೆ ನಿರ್ಮಾಣ ಮಾಡಿದ್ದು ಈಗ ಈ ಹಳ್ಳಕ್ಕೆ ಬ್ಯಾರೇಜ್ ನಿರ್ಮಾಣ ಮಾಡಿದರೆ ಅದರ ಮೂಲಕ ನಿರಂತರವಾಗಿ ಹಿರೆಕೆರೆಗೆ ನೀರು ಬರುವಂತಹ ವ್ಯವಸ್ಥೆಯಾಗಬೇಕು ಎಂದರು.

ನಾಯಕನಹಟ್ಟಿ ಪಟ್ಟಣಕ್ಕೆ ಅತ್ಯವಶ್ಯಕವಾಗಿ ಕುಡಿಯುವ ನೀರು ಮತ್ತು ದೇವಸ್ಥಾನಗಳಿಗೆ ಬರುವಂತಹ ಭಕ್ತಾಧಿಗಳಿಗೆ ಅನುಕೂಲವಾಗುವ ದೃಷ್ಠಿಯಿಂದ ಚಿಕ್ಕಕೆರೆಗೆ ರಾಮಯ್ಯನಕಟ್ಟೆ, ಚನ್ನಬಸಯ್ಯನಹಟ್ಟಿ, ಕೊಂಡಯ್ಯನ ಕೊಪಿಲೆಗಳಿಗೆ ಪೈಪ್‌ಲೈನ್ ಮೂಲಕ ಚಿಕ್ಕಕೆರೆಗೆ ನೀರು ಬಿಡಲು ಸದಾ ನೀರಿನಿಂದ ಇರಲು ಅನುಕೂಲವಾಗುತ್ತದೆ ಎಂದು ತಿಳಿಸಿದರು.ಗುಂತಕೋಲಮ್ಮನಹಳ್ಳಿ, ರೇಖಲಗೆರೆ, ರಾಮಸಾಗರ, ಕೋಡಿಹಳ್ಳಿ ಕೆರೆಗಳಿಗೆ ನೀರು ತುಂಬಿಸಲು ಕಾತ್ರಾಳ್ ಕೆರೆಗೆ ಈಗಾಗಲೇ ನೀರು ಹರಿಸುತ್ತಿದ್ದು ಸಂಗೇನಹಳ್ಳಿ ಕೆರೆ ತುಂಬಿದ ಮೇಲೆ ಜಿನಿಗಿ ಹಳ್ಳದ ಮೂಲಕ ನೀರು ಹರಿಸುವುದರಿಂದ ಈ ಮೇಲ್ಕಾಣಿಸಿದ ಕೆರೆಗಳಿಗೆ ನೀರು ಹರಿಸಿದರೆ ನಾಯಕನಹಟ್ಟಿ ಮತ್ತು ಜಗಳೂರು, ಕೂಡ್ಲಿಗಿ, ಮೊಳಕಾಲ್ಮೂರು ತಾಲ್ಲೂಕಿನ ಸುಮಾರು ಹಳ್ಳಿಗಳಿಗೆ ಅಂತರ್ಜಲ ಹೆಚ್ಚುತ್ತದೆ ಇದರಿಂದ ನಮ್ಮ ಜನಗಳಿಗೆ ಗೂಳೆ ಹೋಗುವುದು ತಪ್ಪಿ ಸುಖಕರ ಜೀವನ ನಡೆಸಲು ಕೈ ಮುಗಿದು ಬೇಡಿಕೊಂಡರು.



ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿಯಲ್ಲಿ ಬುಧವಾರ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 67ನೇ ಪರಿನಿರ್ವಾಣ ದಿನ ಆಚರಿಸಲಾಯಿತು. ಈ ಸಂದರ್ಭದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಸೇರಿದಂತೆ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ ಸಿಬ್ಬಂದಿ ವರ್ಗ, ಆಶಾ ಕಾರ್ಯಕರ್ತೆಯರು ಇದ್ದರು.

### ಸಾಮಾಜಿಕ ಜಾಲತಾಣಗಳು ಜನರ ಸಮಸ್ಯೆಗಳನ್ನು ಬಿಂಬಿಸುವಂತಾಗಲಿ

» ಚಿತ್ರದುರ್ಗ

ಸಾಮಾಜಿಕ ಜಾಲತಾಣಗಳನ್ನು ದುರ್ಬಳಕೆಮಾಡಿಕೊಂಡು ಟಿಕ್‌ಟಾಕ್ ಮಾಡುವುದು, ರೀಲ್ಸ್ ಮಾಡುವುದನ್ನು ಬಿಟ್ಟು, ಜನರ ಸಮಸ್ಯೆಗಳನ್ನು ಬಿಂಬಿಸುವ ಮೂಲಕ ಸಾಮಾಜಿಕಜಾಲತಾಣವನ್ನು ಸದ್ಬಳಕೆ ಮಾಡಿಕೊಳ್ಳಬೇಕೆಂದು ಕರ್ನಾಟಕ ವಿದ್ಯಾರ್ಥಿ ಸಂಘಟನೆಯ ಮುಖಂಡ ಸರೋವರ್ ಬೆಂಕಿಕೆರೆ ಹೇಳಿದರು. ಸೇವಾದಳ ಭವನದಲ್ಲಿ ಸ್ಲಮ್‌ಜನಾಂದೋಲನ ಸಂಘಟನೆಯ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಸಾಮಾಜಿಕ ಜಾಲತಾಣಗಳ ಬಳಕೆ ಕುರಿತು ಕಾರ್ಯಗಾರದಲ್ಲಿ ಭಾಗವಹಿಸಿ ಮಾತನಾಡಿದರು. ಸಾಮಾಜಿಕಜಾಲತಾಣ ನಿರ್ವಹಿಸುವವರು ಟಿಕ್‌ಟಾಕ್‌ಗಳನ್ನು ಮಾಡುವುದುಜನರನ್ನುಅವಮಾನಿಸುವುದು, ರಾಜಕಾರಣಿಗಳನ್ನು ಗೇಲಿಮಾಡುವುದನ್ನು ಸರ್ಕಾರಗಂಭೀರವಾಗಿ ಪರಿಗಣಿಸಿ, ಟಿಕ್‌ಟಾಕ್‌ಗಳನ್ನು ರದ್ದುಪಡಿಸಿದ್ದು, ವಿದ್ಯುತ್ ದೀಪಗಳ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಸುದ್ದಿ ಹರಡಿಸಿ ಅಧಿಕಾರಿಗಳ ಗಮನ ಸೆಳೆಯುವ ಮೂಲಕ ಸಮಸ್ಯೆಗಳ ನಿವಾರಣೆಗೆ ಪ್ರಯತ್ನಿಸಬೇಕೆಂದು ಹೇಳಿದರು.

**ಪ್ರಮುಖ ಸುದ್ದಿ**

# ಶಿಕ್ಷಣ ಮತ್ತು ರಾಜಕೀಯದಿಂದ ಮಾತ್ರ ಪ್ರಗತಿ ಸಾಧ್ಯ

» ಮೊದಲ ಪುಟದಿಂದ

ಈ ಹಿನ್ನಲೆಯಲ್ಲಿ ಕಾಲೇಜು ಮತ್ತು ಹಾಸ್ಟಲ್ ಗಳಲ್ಲಿ ಯುವ ಜನರಿಗೆ ನಮ್ಮ ಸಂವಿಧಾನದ ಬಗ್ಗೆ ಅರಿವು ಮೂಡಿಸುವ ಕಾರ್ಯವನ್ನು ಮುಂದಿನ ದಿನಮಾನದಲ್ಲಿ ಮಾಡಲಾಗುತ್ತದೆ ಇದರಿಂದ ಮುಂದಿನ ಚುನಾವಣೆಯಲ್ಲಿ ಬಿಜೆಪಿಗೆ ಮತ ಹಾಕುವುದನ್ನು ತಪ್ಪಿಸಬೇಕಿದೆ ಎಂದರು.

ಡಾ.ಬಿ.ಆರ್.ಅಂಬೇಡ್ಕರ್‌ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಬದುಕಿದ್ದಾಗ ಡಾ.ಬಿ.ಆರ್.ಅಂಬೇಡ್ಕರ್‌ರವರು ಸಮಾಜಕ್ಕೆ ಏನು ಕೊಡುಗೆ ಕೊಟ್ಟರು ಎನ್ನುವುದನ್ನು ನೆನಪು ಮಾಡಿಕೊಳ್ಳುವ ದಿನ ಇದು. ಡಾ.ಬಿ.ಆರ್.ಅಂಬೇಡ್ಕರ್ ಕೇವಲ ದಲಿತರಿಗಷ್ಟೆ ಮೀಸಲಾತಿಯನ್ನು ಕೊಟ್ಟಿದ್ದಾರೆನ್ನುವ ತಪ್ಪು ಕಲ್ಪನೆ ಇನ್ನು ಸಾಕಷ್ಟುಜನರಮನದಲ್ಲಿದೆ.ಬಾಲ್ಯದಲ್ಲಿಯೇ ಅನೇಕ ಕಷ್ಟ, ಅವಮಾನಗಳನ್ನು ಎದುರಿಸಿ ಶಿಕ್ಷಣ ಪಡೆದು ಅಮೇರಿಕ ಲಂಡನ್‌ನಲ್ಲಿ ಉನ್ನತ ವ್ಯಾಸಂಗ ಪಡೆದು ಭಾರತಕ್ಕೆ ಮರಳಿದ ಅವರು ಶೋಷಿತರು ಧ್ವನಿ ಇಲ್ಲದವರಿಗೆ ಶಕ್ತಿಯಾಗಿ ಸಂವಿಧಾನವನ್ನು ರಚಿಸಿ ಕೊಡುಗೆಯಾಗಿ ನೀಡಿದ್ದಾರೆಂದು ಬಣ್ಣಿಸಿದರು.

ಮಹಿಳೆಯರಿಗೂ ಮೀಸಲಾತಿ ಸಿಗಬೇಕನ್ನುವ ಉದ್ದೇಶದಿಂದ ಹಿಂದೂ ಕೋಡ್‌ಬಿಲ್ ತಂದರು, ಆರ್.ಬಿ.ಐ.ಯನ್ನು ದೇಶದಲ್ಲಿ ತರದೆ ಹೋಗಿದ್ದರೆ ಯಾರೂ ಕೋಟ್ಯಾಧಿಪತಿಗಳು ನಮ್ಮ ದೇಶದಲ್ಲಿ ಇರುತ್ತಿರಲಿಲ್ಲ. ಕಾರ್ಮಿಕರು ದಿನಕ್ಕೆ ಎಂಟು ಗಂಟೆಗಳ ಕಾಲ ಕೆಲಸ ಮಾಡಬೇಕೆಂಬ ಕಾನೂನು ಜಾರಿಗೆ ತಂದವರು ಅಂಬೇಡ್ಕರ್ ಎನ್ನುವುದನ್ನು ಮರೆಯುವಂತಿಲ್ಲ. ಕೋಮುವಾದಿಗಳು ಸಂವಿಧಾನ ಬದಲಾವಣೆ ಮಾಡಲು ಹೊರಟಿದ್ದಾರೆ. ಅದಕ್ಕೆ ಅವಕಾಶ ಕೊಡಬಾರದು ಎಂದು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಡಿ.ಎನ್.ಮೈಲಾರಪ್ಪ ಮಾತನಾಡಿ 1956 ಡಿ.6 ರಂದು ಡಾ.ಬಿ.ಆರ್.ಅಂಬೇಡ್ಕರ್ ಪ್ರಾಣ ಬಿಟ್ಟ ದಿನವನ್ನು ಪರಿನಿರ್ವಾಣ ಎಂದು ಕರೆಯಲಾಗುತ್ತದೆ. 197 ದೇಶಗಳಲ್ಲಿಯೂ ಅಂಬೇಡ್ಕರ್‌ರವರನ್ನು ಸ್ಮರಣೆ ಮಾಡಲಾಗುತ್ತದೆ. ಶಿಕ್ಷಣ, ಸಂಘಟನೆ, ಹೋರಾಟವನ್ನು ಅಸ್ಪೃಶ್ಯರಿಗೆ ನೀಡಿದ ಕೀರ್ತಿ ಅಂಬೇಡ್ಕರ್‌ಗೆ ಸಲ್ಲಬೇಕು ಎಂದು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಪಿ.ಸಂಪತ್‌ಕುಮಾರ್ ಮಾತನಾಡುತ್ತ ಸಂವಿಧಾನಶಿಲ್ಪಿ, ಮಹಾನ್ ಮಾನವತಾವಾದಿ ಡಾ.ಬಿ.ಆರ್.ಅಂಬೇಡ್ಕರ್‌ರವರನ್ನು ಇಡಿ ವಿಶ್ವವೇ ಸ್ಮರಿಸಿಕೊಳ್ಳುತ್ತಿದೆ. ಬಿ.ಜೆ.ಪಿ. ಸಂವಿಧಾನವನ್ನು ಬದಲಾವಣೆ ಮಾಡಲು ಹೊರಟಿದೆ. ಹಾಗಾಗಿ ಎಲ್ಲರೂ ಅಂಬೇಡ್ಕರ್‌ರವರ ಮಾರ್ಗದಲ್ಲಿ ಸಾಗಿ ಸಂವಿಧಾನವನ್ನು ರಕ್ಷಿಸಬೇಕಿದೆ ಎಂದು ವಿನಂತಿಸಿದರು.

ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಶ್ರೀಮತಿ ರೇಣುಕಶಿವು ಮಾತನಾಡಿ ಡಾ.ಬಿ.ಆರ್.ಅಂಬೇಡ್ಕರ್ ಎಂದರೆ ಒಂದು ಶಕ್ತಿ. ಸಂವಿಧಾನದ ಅಡಿಯಲ್ಲಿ ಎಲ್ಲರೂ ಸಮಾನವಾಗಿ ಬದುಕಲು ಅವಕಾಶ ಕಲ್ಪಿಸಿದ್ದಾರೆ. ಪ್ರಜಾಪ್ರಭುತ್ವದಲ್ಲಿ ಸಂವಿಧಾನವನ್ನು ರಚಿಸದೆ ಹೋಗಿದ್ದರೆ ಕಾನೂನೇ ಇರುತ್ತಿರಲಿಲ್ಲ ಎಂದು ಸಂವಿಧಾನದ ಉಪಯೋಗ ತಿಳಿಸಿದರು.

ದಲಿತ ಮುಖಂಡ ಬಿ.ರಾಜಣ್ಣ ಮಾತನಾಡುತ್ತ ವಿಶ್ವಾದ್ಯಂತ ಪರಿನಿರ್ವಾಣ ದಿನದ ಮೂಲಕ ಡಾ.ಬಿ.ಅಂಬೇಡ್ಕರ್‌ವರ ಸ್ಮರಣೆಯಾಗುತ್ತಿದೆ. ದೀನದಲಿತರು, ಅಲ್ಪಸಂಖ್ಯಾತರು, ಹಿಂದುಳಿದವರು, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದವರಿಗೆ ಸಂವಿಧಾನದ ಮೂಲಕ ಶಕ್ತಿ ನೀಡಿದ್ದಾರೆ. ಕೆಳಜಾತಿ ತಳಸಮುದಾಯದವರಿಗೆ ಈಗಲೂ ಧ್ವನಿಯಾಗಿದ್ದಾರೆಂದರು.

ನ್ಯಾಯವಾದಿ ಮಲ್ಲೇಶ್ ಮಾತನಾಡಿ ಅಂಬೇಡ್ಕರ್ ಸಂವಿಧಾನ ಕೊಟ್ಟಿದ್ದರಿಂದ ನಾನೂ ಕೂಡ ವಕೀಲನಾಗಲು ಸಾಧ್ಯವಾಯಿತು. ಪ್ರತಿಯೊಬ್ಬರು ಶಿಕ್ಷಣಕ್ಕೆ ಆದ್ಯತೆ ಕೊಡಬೇಕು. ಅಂಬೇಡ್ಕರ್ ಕೊಟ್ಟಿರುವ ಮೀಸಲಾತಿಯನ್ನು ಬಳಸಿಕೊಂಡು ಪ್ರತಿಯೊಂದು ಮಗುವಿಗೂ ಶಿಕ್ಷಣ ಕೊಡಿಸಬೇಕು. ಮಹಿಳಾ ಮೀಸಲಾತಿಗೆ ಮೊದಲು ಪ್ರಸ್ತಾಪಿಸಿದ್ದು, ಅಂಬೇಡ್ಕರ್ ಎನ್ನುವುದನ್ನು ನೆನಪಿಸಿದರು.

ಜಿಲ್ಲಾ ಕಾಂಗ್ರೆಸ್ ಪರಿಶಿಷ್ಟ ವರ್ಗಗಳ ವಿಭಾಗದ ಅಧ್ಯಕ್ಷ ಹೆಚ್.ಅಂಜಿನಪ್ಪ ಮಾತನಾಡುತ್ತ ಸಂವಿಧಾನವೇ ಎಲ್ಲರಿಗೂ ಭಗವದ್ಗೀತೆಯಿದ್ದಂತೆ. ಡಾ.ಬಿ.ಆರ್. ಅಂಬೇಡ್ಕರ್ ಜನ್ಮದಿನವನ್ನು ಹಬ್ಬವನ್ನಾಗಿ ಎಲ್ಲಿಯವರೆಗೂ ಮನೆ ಮನೆಗಳಲ್ಲಿ ಆಚರಿಸುವುದಿಲ್ಲವೋ ಅಲ್ಲಿಯತನಕ ಸಂವಿಧಾನಕ್ಕೆ ಅರ್ಥ ಬರುವುದಿಲ್ಲ. ಬಿ.ಜೆ.ಪಿ.ಯವರು ಸಂವಿಧಾನವನ್ನು ಬದಲಾಯಿಸಲು ಹೊರಟಿದ್ದಾರೆ. ನಾಲ್ಕು ಗೋಡೆಗಳ ನಡುವೆ ಅಂಬೇಡ್ಕರ್ ಜಯಂತಿ ಹಾಗೂ ಪರಿನಿರ್ವಾಣ ದಿನವನ್ನು ಆಚರಿಸುವ ಬದಲು ಗ್ರಾಮೀಣ ಭಾಗಗಳಲ್ಲಿಆಚರಿಸಿದರೆದಲಿತರು,ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಹಿಂದುಳಿದವರು, ಅಲ್ಪಸಂಖ್ಯಾತರಿಗೆ ಸಂವಿಧಾನದ ಪ್ರಯೋಜನ ತಿಳಿಸಿದಂತಾಗುತ್ತದೆ ಎಂದು ಸಲಹೆ ನೀಡಿದರು.

ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಶ್ರೀಮತಿ ಗೀತ ನಂದಿನಿಗೌಡ, ಕೋಟೆ, ಸೈಯದ್ ಖುದ್ದೂಸ್, ಚಾಂದ್‌ಪೀರ್, ಶಬ್ಬೀರ್‌ಭಾಷ, ಸೈಯದ್ ಸೈಫುಲ್ಲಾ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಆರ್.ನರಸಿಂಹರಾಜ ಇನ್ನು ಅನೇಕರು ಅಂಬೇಡ್ಕರ್ ಪರಿನಿರ್ವಾಣ ದಿನದಲ್ಲಿ ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಜುಡೋ ಸ್ಪರ್ಧೆಗೆ ಪುರುಷ ಮತ್ತು ಮಹಿಳಾ ಕ್ರೀಡಾ ಪಟುಗಳ ಆಯ್ಕೆ ಪ್ರಕ್ರಿಯೆ ಸಮಾರಂಭ

» **ದಾವಣಗೆರೆ**

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ದಾವಣಗೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ದಾವಣಗೆರೆ ವಿಶ್ವವಿದ್ಯಾನಿಲಯ ಹಾಗೂ ದೈಹಿಕ ಶಿಕ್ಷಣ ನಿರ್ದೇಶಕರ ಸಂಘ ಇವರುಗಳ ಸಂಯುಕ್ತಾಶ್ರಯದಲ್ಲಿ 2023-24ನೇ ಸಾಲಿನ ದಾವಣಗೆರೆ ವಿಶ್ವವಿದ್ಯಾನಿಲಯ ಮಟ್ಟದ ಅಂತರಕಾಲೇಜು, ಪುರುಷರ ಮತ್ತು ಮಹಿಳೆಯರ ಜುಡೋ ಸ್ಪರ್ಧೆ ಹಾಗೂ ದಾವಣಗೆರೆ ವಿಶ್ವವಿದ್ಯಾನಿಯ ಜುಡೋ ಕ್ರೀಡಾ ಪಟುಗಳ ಆಯ್ಕೆ ಪ್ರಕ್ರಿಯೆ ಉದ್ಘಾಟನಾ ಸಮಾರಂಭ ಇಂದು7 ರ ಗುರುವಾರ 10 ಗಂಟೆಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯಲಿದೆ.ಕಾರ್ಯಕ್ರಮದ ಉದ್ಘಾಟನೆಯನ್ನು ದಾವಣಗೆರೆ ಟೈಮ್ಸ್, ಪತ್ರಿಕೆ ಸಂಪಾದಕರು ಜೆ ಎಸ್ ವೀರೇಶ್, , ಇವರು ನೆರವೇರಿಸಲಿದ್ದು, ಕಾಲೇಜು ಪ್ರಾಂಶುಪಾಲ ಪ್ರೊ. ದಾದಾಪೀರ್ ಬಿ. ಸಿ. ಅಧ್ಯಕ್ಷತೆ ವಹಿಸಲಿದ್ದಾರೆ, ದಾವಣಗೆರೆ ವಿಶ್ವವಿದ್ಯಾನಿಲಯ ದೈಹಿಕ ಶಿಕ್ಷಣ ವಿಭಾಗದ ಪ್ರಭಾರಿ ನಿರ್ದೇಶಕರಾದ ಪ್ರೊ. ವೆಂಕಟೇಶ್, ಕ್ರೀಡಾಧಿಕಾರಿಗಳು ಡಾ. ವೀರಪ್ಪ ಬಿ. ಹೆಚ್. ದಾವಣಗೆರೆ ವಿಶ್ವವಿದ್ಯಾನಿಲಯ, ವಾಣಿಜ್ಯಶಾಸ್ತ್ರ ವಿಭಾಗ ಬಸವರಾಜ ತಹಸೀಲ್ದಾರ್ ಮುಖ್ಯಸ್ಥರು,ರಾಜ್ಯಶಾಸ್ತ್ರಸಹಾಯಕಪ್ರಾಧ್ಯಾಪಕರು ಡಾ. ಲತಾ ಸಿ ವಿ, ಗಣಿತಶಾಸ್ತ್ರ ಸಹಾಯಕ ಪ್ರಾಧ್ಯಾಪಕರು ಸವಿತಾ ಬಿ ಮೇಗಲಮನಿ, ವಾಣಿಜ್ಯಶಾಸ್ತ್ರ, ಸಹಾಯಕ ಪ್ರಾಧ್ಯಾಪಕರು ಪ್ರೊ. ವೆಂಕಟೇಶ್ ಬಾಬು ಎಸ್, ವಾಣಿಜ್ಯಶಾಸ್ತ್ರ, ಸಹಾಯಕ ಪ್ರಾಧ್ಯಾಪಕರು ಪ್ರೊ. ಶಂಭುಲಿಂಗಪ್ಪ ನಲ್ಲನವರ್, ಪರಿಸರವಿಜ್ಞಾನ, ಸಹಾಯಕ ಪ್ರಾಧ್ಯಾಪಕರು ಪ್ರೊ. ನಾಗೇಂದ್ರನಾಯಕ್ ಕೆ, ಆಂಗ್ಲಭಾಷಾ, ಸಹಾಯಕ ಪ್ರಾಧ್ಯಾಪಕರು ಪ್ರೊ. ಮಂಜುನಾಥ.ಜಿ, ಪತ್ರಾಂಕಿತ ವ್ಯವಸ್ಥಾಪಕರು ಶ್ರೀಮತಿ ಗೀತಾದೇವಿ ಉಪಸ್ಥಿತರಿರುವರು.

### ಗೋಪನಹಳ್ಳಿ ಸಾರ್ವಜನಿಕ ರಸ್ತೆಯಲ್ಲಿ ಇಸ್ಪೀಟ್ ಜೂಜಾಟ: 31750ರೂ ನಗದು ವಶ

» **ಚಳ್ಳಕೆರೆ**

ತಾಲ್ಲೂಕಿನ ಗೋಪನಹಳ್ಳಿ ಅಡವಿಚಿಕ್ಕೇನಹಳ್ಳಿ ಗ್ರಾಮದ ಜಮೀನ ರಸ್ತೆಯಲ್ಲಿ ಹಾಡುಹಗಲೇ ಜೂಜಾಟವಾಡುತ್ತಿದ್ದ ರಹೀಂನಗರ ನಿವಾಸಿ ಮೆಹಬೂಬ್‌ಬಾಷ(30) ಇತರೆಯವರನ್ನು ಬಂಧಿಸಿ ಅವರಿಂದ ಜೂಜಾಟದ ಹಣ 31750ರೂಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಠಾಣಾಧಿಕಾರಿ ಖಲಂದರ್‌ಖಾನ್ ತಿಳಿಸಿದ್ದಾರೆ. ಖಚಿತ ವರ್ತಮಾನದ ಮೇರೆಗೆ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಪೇದೆ ವಿಶಾಲ್ ಮತ್ತು ಸಿಬ್ಬಂದಿ ವರ್ಗ ಬುಧವಾರ ಮಧ್ಯಾಹ್ನ ದಾಳಿ ನಡೆಸಿದಾಗ ಜೂಜುಕೋರರು ಹಣಸಹಿತ ಪೊಲೀಸರಿಗೆ ಸಿಕ್ಕಿ ಬಿದಿದ್ದಾರೆ. ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

### ಬೆಸ್ಕಾಂ ತ್ರೈಮಾಸಿಕ ನಿರ್ವಹಣಾ ಕಾಮಗಾರಿ: ಡಿ.8ರಂದು ವಿದ್ಯುತ್ ಸರಬರಾಜು ಸ್ಥಗಿತ

» **ಚಳ್ಳಕೆರೆ**

ಚಳ್ಳಕೆರೆ ಬೆಸ್ಕಾಂ ವಿಭಾಗದ ದ್ಯಾವರನಹಳ್ಳಿ ಎಂಯುಎಸ್‌ಎಸ್‌ನಲ್ಲಿ ತ್ರೈಮಾಸಿಕ ಕಾಮಗಾರಿ ಹಿನ್ನೆಲೆ ಡಿ.8ರ ಶುಕ್ರವಾರ ಬೆಳಗ್ಗೆ 10ರಿಂದ ಸಂಜೆ 4ರ ತನಕ ವಿದ್ಯುತ್ ಸರಬರಾಜನ್ನು ತಡೆಯಲಾಗುವುದು ಎಂದು ಎಇಇ ರಾಜು ತಿಳಿಸಿದ್ದಾರೆ. ಜಾಜೂರು, ಚನ್ನಮ್ಮನಾಗತಿಹಳ್ಳಿ ದೇವರಮರಿಕುಂಟೆ, ಮೀರಸಾಬಿಹಳ್ಳಿ, ದೊಡ್ಡೇರಿ, ಚೌಳೂರು, ಪರಶುರಾಮಪುರ, ದೊಡ್ಡಬೀರನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜು ಸ್ಥಗಿತಗೊಳ್ಳಲಿದ್ದು ಸಾರ್ವಜನಿಕರು ಸಹಕರಿಸುವಂತೆ ಮನವಿ ಮಾಡಿದ್ದಾರೆ.

### ಮಾಜಿ ಸೈನಿಕರಿಂದ ಅರ್ಜಿ

» **ದಾವಣಗೆರೆ**

ಶಿವಮೊಗ್ಗದ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ವತಿಯಿಂದ ಡಿ.16 ರಂದು ನಡೆಯಲಿರುವ ವಿಜಯ ದಿವಸದ ಅಂಗವಾಗಿ 1971ರ ಯುದ್ಧದಲ್ಲಿ ಸಕ್ರಿಯವಾಗಿ ಭಾಗವಹಿಸಿದ ಮಾಜಿ ಸೈನಿಕರಿಂದ ಸನ್ಮಾನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.ಯುದ್ಧದಲ್ಲಿ ಸಕ್ರಿಯವಾಗಿ ಭಾಗವಹಿಸಿದ ಮಾಜಿ ಸೈನಿಕರು ತಮ್ಮ ಮಾಜಿ ಸೈನಿಕ ಗುರುತಿನ ಚೀಟಿ ಮತ್ತು ಪೂರ್ವ ಅಥವಾ ಪಶ್ಚಿಮ ಮೆಡಲ್‌ಗಳನ್ನು ಹೊಂದಿರುವ ಸ್ವವಿವರಗಳನ್ನೊಳಗೊಂಡ ಮಾಹಿತಿಯನ್ನು soldiersshimoga@gmail.com ಅಥವಾ ದೂ.08182-220925ಗೆ ಕರೆ ಮಾಡಿ ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಶಿವಮೊಗ್ಗ ದೂ.08182-220925ಗೆ ಸಂಪರ್ಕಿಸಲು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಪ್ರಭಾರ ಉಪ ನಿರ್ದೇಶಕ ಡಾ. ಸಿ.ಎ ಹಿರೇಮಠ್ ತಿಳಿಸಿದ್ದಾರೆ.

---

**ಬಿಇಇ ಸ್ಟಾರ್ ಲೇಬಲ್‌ವುಳ್ಳ ಇಂಧನ ದಕ್ಷ ಪಂಪ್‌ಸೆಟ್ ಬಳಕೆ ಮತ್ತು ನೀರಿನ ಸಂರಕ್ಷಣೆ ಕುರಿತು ರೈತರಿಗೆ ತರಬೇತಿ ಕಾರ್ಯಾಗಾರ**

# ಕೃಷಿ ಕ್ಷೇತ್ರದಲ್ಲಿ ಬಿಇಇ ಸ್ಟಾರ್‌ರೇಟ್ ಪಂಪ್‌ಸೆಟ್ ಬಳಕೆಯಿಂದ ವಿದ್ಯುತ್ ಉಳಿತಾಯ: ರಾಜಶೇಖರ್

» **ಚಿತ್ರದುರ್ಗ**

ಬಿ.ಇ.ಇ ಸ್ಟಾರ್ ಲೇಬಲ್‌ವುಳ್ಳ ಕೃಷಿ ಹಾಗೂ ಗೃಹ ಬಳಕೆಯ ಪಂಪ್‌ಸೆಟ್‌ಗಳು ಹೆಚ್ಚು ಇಂಧನದಕ್ಷತೆ ಹೊಂದಿರುವುದರಜೊತೆಗೆ ವಿದ್ಯುತ್ ಉಳಿತಾಯಕ್ಕೆ ಸಹಕಾರಿಯಾಗಿವೆ. ಕೃಷಿ ಕ್ಷೇತ್ರದಲ್ಲಿ ಬಿ.ಇ.ಇ ಸ್ಟಾರ್ ರೇಟೆಉಳ್ಳ ಪಂಪುಗಳನ್ನು ಬಳಸುವುದರಿಂದ ಅಂದಾಜು ಶೇ.30 ರಷ್ಟು ವಿದ್ಯುತ್ ಉಳಿತಾಯ ಸಾಧ್ಯ ಎಂದು ಬಬ್ಬೂರು ತೋಟಗಾರಿಕೆ ಕಾಲೇಜು ಸಹಾಯಕ ಪ್ರಾಧ್ಯಾಪಕ ರಾಜಶೇಖರ್ ಭಾರ್ಕೆರ್ ಹೇಳಿದರು.

ಹಿರಿಯೂರು ತಾಲ್ಲೂಕಿನ ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿಕೇಂದ್ರದಲ್ಲಿ ಈಚೆಗೆ ಬ್ಯರೋ ಅಫ್ ಎನರ್ಜಿ ಎಫಿಷಿಯನ್ಸಿ (ಬಿಇಇ) ಹಾಗೂ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ (ಕೆ.ಆರ್.ಇ.ಡಿ.ಎಲ್) ಇವರ ಸಹಯೋಗದೊಂದಿಗೆ ಬಿ.ಇ.ಇ ಸ್ಟಾರ್ ಲೆಬಲ್ ಹೊಂದಿರುವ ಹೆಚ್ಚು ವಿದ್ಯುತ್ ದಕ್ಷತೆಯುಳ್ಳ ಕೃಷಿ ಪಂಪ್‌ಸೆಟ್‌ಗಳು ಹಾಗೂ ಜಲ ಸಂರಕ್ಷಣೆ ಕುರಿತು ರೈತರಿಗೆ ಒಂದು ದಿನದ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸರಿಯಾದ ಪಂಪಿಂಗ್ ಸಿಸ್ಟಮ್ ಘಟಕಗಳನ್ನು ಆಯ್ಕೆ ಮಾಡುವ ಮೂಲಕ ವಿದ್ಯುತ್ ನಷ್ಟಗಳನ್ನು ಕಡಿಮೆ ಮಾಡಬಹುದು.ನೀರನ್ನುಅನಾವಶ್ಯಕವಾಗಿ ಪೋಲು ಮಾಡಬಾರದು. ಏಕೆಂದರೆ,



ನೀರೆತ್ತಲು ಹಾಗೂ ಸಾಗಿಸಲು ವಿದ್ಯುತ್ ಬೇಕು. ಆದುದರಿಂದ ನೀರನ್ನು ಮಿತವಾಗಿ ಹಾಗೂ ಅವಶ್ಯಕತೆಗೆ ಅನುಗುಣವಾಗಿ ಬಳಸಿದರೆ ವಿದ್ಯುತ್ತಿನ ಉಳಿತಾಯ ಸಾಧ್ಯ ಎಂದು ಹೇಳಿದರು.

ಚಳ್ಳಕೆರೆ ಉಪ ಕೃಷಿ ನಿರ್ದೇಶಕ ಡಾ.ಬಿ.ಎನ್. ಪ್ರಭಾಕರ್ ಮಾತನಾಡಿ, ಕೃಷಿಯಲ್ಲಿ ವಿದ್ಯತ್ ಮತ್ತು ನೀರನ್ನು ಮಿತವಾಗಿ ಬಳಸಲು ಬಿ.ಇ.ಇ ಸ್ಟಾರ್ ಲೆಬಲ್ ಹೊಂದಿರುವ ಹೆಚ್ಚು ವಿದ್ಯುತ್ ದಕ್ಷತೆಯುಳ್ಳ ಕೃಷಿ ಪಂಪ್‌ಸೆಟ್‌ಗಳ ಬಳಕೆಗೆ ಒತ್ತು ನೀಡಬೇಕು. ಆಗಿಂದಾಗೆ ನೀರು ಉಣಿಸುವ ಪೈಪ್‌ಲೈನ್‌ನ ವಾಷರ್‌ಗಳನ್ನು ಪರೀಕ್ಷಿಸುವುದು ಮತ್ತು ಎಂಡ್‌ಕ್ಯಾಪ್‌ನ್ನು ಪರೀಕ್ಷಿಸಿ ಸ್ವಚ್ಛಗೊಳಿಸಬೇಕು ಎಂದು ಹೇಳಿದರು.

ಜಲ ವಿಜ್ಞಾನಿ ಹಾಗೂ ಮಳೆನೀರು ಕೊಯ್ಲು ತಜ್ಞ ಡಾ. ಎನ್. ಜೆ.ದೇವರಾಜರೆಡ್ಡಿ ಮಾತನಾಡಿ, ಮಳೆನೀರು ಕೊಯ್ಲು, ಬೋರ್‌ವೆಲ್‌ನಲ್ಲಿ ಅಂತರ ಜಲ ಮರುಪೂರಣ, ಮಳೆ ನೀರಿನ ಬಜೆಟ್, ನೀರಿನ ಮಿತಬಳಕೆ ಮತ್ತು ಜಲ ಸಂರಕ್ಷಣೆ ಕುರಿತು ರೈತರಿಗೆ ಮಾಹಿತಿ ನೀಡಿದರು.

ಸೆಲ್ಕೋ ಸಂಸ್ಥೆಯ ವ್ಯವಸ್ಥಾಪಕ ಅಜ್ಜಯ್ಯ ಅವರು, ಸೌರಶಕ್ತಿಯಿಂದ ವಿವಿಧ ಜೀವನೋಪಾಯದ ಚಟುವಟಿಕೆಗಳ ಕುರಿತು ಮಾಹಿತಿ ನೀಡುತ್ತಾ, ಸೌರಶಕ್ತಿಯಿಂದ ಚಾಲಿತ ಕೃಷಿ ಪಂಪ್‌ಸೆಟ್‌ಗಳು, ಹಿಟ್ಟಿನಗಿರಣಿ, ರೊಟ್ಟಿ ತಯಾರಿಸುವ ಯಂತ್ರ, ಮನೆಯಲ್ಲಿ ಸೌರ ವಿದ್ಯುತ್ ಚಾಲಿತ ಉಪಕರಣಗಳು, ಸೋಲಾರ್ ಬಿಸಿ ನೀರಿನಘಟಕ, ವಿವಿಧ ಸೌರಶಕ್ತಿಯಿಂದ ಚಾಲಿತ ವಿವಿಧ ಕೃಷಿ ಯಂತ್ರೋಪಕರಣಗಳ ಬಗ್ಗೆ ವಿಷಯ ಮಂಡನೆ ಮಾಡಿ ರೈತರಲ್ಲಿ ಸೌರಶಕ್ತಿಯ ಬಳಕೆಯ ಕುರಿತು ಜಾಗೃತಿ ಮೂಡಿಸಿದರು.

ಬೇಸಾಯಶಾಸ್ತ್ರಜ್ಞ ಅಂಜಿನಪ್ಪ ಮಾತನಾಡಿ, ಹನಿ ಮತ್ತು ತುಂತುರು ನೀರಾವರಿಯಿಂದ ನೀರಿನ ಮಿತಬಳಕೆ ಸಾಧ್ಯ. ಹನಿ ನೀರಾವರಿ ಉಪಕರಣಗಳ ಆಯ್ಕೆ, ವಿನ್ಯಾಸ, ಅಳವಡಿಕೆ, ಕ್ಷೇತ್ರದಲ್ಲಿ ಉದ್ಭವಿಸುವ ಸಮಸ್ಯೆಗಳಿಗೆ ಪರಿಹಾರ, ರಸವಾರಿ ಮೂಲಕ ವಿವಿಧ ಪೋಷಕಾಂಶಗಳ ನಿರ್ವಹಣೆ ಮತ್ತು ವಿವಿಧ ರೀತಿಯ ಫಿಲ್ಟರ್‌ಗಳ ಅಳವಡಿಕೆ, ಆಸಿಡ್ ಕ್ಲೀನಿಂಗ್ ಕುರಿತು ತಿಳಿಸಿದರು.

ಇದೇ ಸಂದರ್ಭದಲ್ಲಿ ಇಂಧನದಕ್ಷತೆ ಹಾಗೂ ಸಂರಕ್ಷಣಾ ಮಾಹಿತಿ ಕಿರುಹೊತ್ತಿಗೆ ಬಿಡುಗಡೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಚಿತ್ರದುರ್ಗ ಉಪಕೃಷಿ ನಿರ್ದೇಶಕ ಶಿವಕುಮಾರ್, ನಿವೃತ್ತ ಸಹಾಯಕ ಕೃಷಿ ನಿರ್ದೇಶಕ ವೀರಭದ್ರರೆಡ್ಡಿ, ಜಿಲ್ಲಾ ಕೃಷಿ ತರಬೇತಿ ಕೇಂದ್ರ ಬಬ್ಬೂರು ಫಾರಂನ ಸಹಾಯಕ ಕೃಷಿ ನಿರ್ದೇಶಕ ಆರ್. ರಜನೀಕಾಂತ,. ಸಹಾಯಕ ಕೃಷಿ ನಿರ್ದೇಶಕರಾದ ಉಷಾರಾಣಿ, ಕೃಷಿ ಅಧಿಕಾರಿಗಳಾದ ರಂಜಿತಾ ಮತ್ತು ಪವಿತ್ರ ಹಾಗೂ ಜಿಲ್ಲಾ ಕೃಷಿ ತರಬೇತಿಕೇಂದ್ರ, ಬಬ್ಬೂರು ಫಾರಂನ ಸಿಬ್ಬಂದಿಯವರು ಇದ್ದರು.

---

# ಸಾಮಾನ್ಯನೂ ದೇಶದ ಉನ್ನತ ಸ್ಥಾನಕ್ಕೆರುವ ಅವಕಾಶ ಕಲ್ಪಿಸಿದ್ದು ಅಂಬೇಡ್ಕರ್: ಪಾಟೀಲ್

» **ಹೊಸದುರ್ಗ**

ಸಾಮಾನ್ಯ ಕುಟುಂಬ ಒಂದರಲ್ಲಿ ಜನಿಸಿದ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ತಮ್ಮ ಜೀವನದೂದ್ದಕ್ಕೂ ಸಾಕಷ್ಟು ಕಷ್ಟ, ಹಿಂಸೆ ಮತ್ತು ಟೀಕೆಗಳಿಗೆ ಒಳಗಾಗಿ, ಧೈರ್ಯಗೊಂದದೆ ವಿವಿಧ ದೇಶಗಳಲ್ಲಿ ವಿದ್ಯಾಭ್ಯಾಸ ನಡೆಸಿ ವಿಶ್ವಜ್ಞಾನಿ ಎನ್ನುವ ಖ್ಯಾತಿ ಪಡೆದು ದೇಶಕ್ಕೆ ಸಂವಿಧಾನ ರಚಿಸಿಕೊಟ್ಟು, ರಾಷ್ಟ್ರದ ಸಾಮಾನ್ಯ ವರ್ಗದ ವ್ಯಕ್ತಿಯೊಬ್ಬ ದೇಶದ ಉನ್ನತ ಸ್ಥಾನಮಾನಕ್ಕೆ ಏರುವಂತಹ ಅವಕಾಶ ಕಲ್ಪಿಸಿದ್ದು, ಬಾಬಾ ಸಾಹೇಬ್ ಅಂಬೇಡ್ಕರ್ ಎಂದು ತಹಶೀಲ್ದಾರ್ ತಿರುಪತಿ ಪಾಟೀಲ್ ಹೇಳಿದರು.



ಬಾಬಾ ಸಾಹೇಬ್ ಡಾ.ಬಿ.ಆರ್ ಅಂಬೇಡ್ಕರ್ ರವರ ಮಹಾ ಪರಿನಿರ್ವಾಣ ದಿನದ ನಿಮಿತ್ತ ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿರುವ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನಂತರ ಮಾತನಾಡಿದ ಅವರು, ಬಾಬಾ ಸಾಹೇಬರು ಹಲವಾರು ವರ್ಷಗಳಿಂದಲೂ ಶೋಷಣೆಗೊಳಗಾಗಿ,ಮೂಢನಂಬಿಕೆ ಗಳಿಂದ ಬಂಧಿಸಲ್ಪಟ್ಟ ಜನರ ಬದುಕಿಗೆ ಬೆಳಕಾಗಿ ಬಂದ ಮಹಾ ಮಾನವತಾವಾದಿ ಎಂದು ಸ್ಮರಿಸಿಕೊಂಡರು. ಬಿಜೆಪಿ ಮುಖಂಡ ಗೂಳಿಹಟ್ಟಿ ಕೃಷ್ಣಮೂರ್ತಿ ಮಾತನಾಡಿ, ಅಂಬೇಡ್ಕರ್ ರವರು ಜಾತಿ ಸಂಕೋಲೆ, ವರ್ಗ ಮತ್ತು ವರ್ಣ ತಾರತಮ್ಯದಿಂದ ಸ್ವತಃ ತಾವೇ ಸಾಕಷ್ಟು ನೋವು ಅನುಭವಿಸಿದ್ದಾರೆ. ಹಾಗಾಗಿಯೇ, ದೇಶದ ಜನರಲ್ಲಿದ್ದ ಅಸಮಾನತೆ, ಅಸ್ಪೃಶ್ಯತೆ, ಲಿಂಗ ಮತ್ತು ವರ್ಣ ತಾರತಮ್ಯವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಪಣತೊಟ್ಟು, ವಿವಿಧ ದೇಶಗಳಲ್ಲಿ ವಿದ್ಯಾಭ್ಯಾಸ ನಡೆಸಿ, ಜ್ಞಾನದ ಗಣಿಯಾಗಿ ಬಹುದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರಕ್ಕೆ ಸಂವಿಧಾನ ಶಿಲ್ಪಿಯಾಗಿದ್ದಾರೆ. ಅವರ ತತ್ವ ಮತ್ತು ಆದರ್ಶ ನಮಗೆ ಮಾದರಿಯಾಗಬೇಕೆಂದು ತಿಳಿಸಿದರು.

ಸದ್ಗುರು ಆಯುರ್ವೇದ ಉತ್ಪನ್ನಗಳ ಮಾಲೀಕ ಡಿ.ಎಸ್.ಪ್ರದೀಪ್ ಮಾತನಾಡಿ, ನನ್ನ ದೇಶದ ಪ್ರತಿಯೊಬ್ಬ ವ್ಯಕ್ತಿಯೂ ಇಲ್ಲಿ ಸಮಾನತೆಯಿಂದ ಸ್ವಾಭಿಮಾನದ ಬದುಕು ನಡೆಸಬೇಕೆಂಬ ಸದಾಶಯ ಹೊಂದಿದ್ದರು. ಅವರು ರಚಿಸಿ ಕೊಟ್ಟಿರುವ ಸಂವಿಧಾನದಿಂದ ಇಂದು ಸಾಮಾನ್ಯ ಬಡ ಕುಟುಂಬದಲ್ಲಿ ಜನಿಸಿದವರು ಕೂಡ ದೇಶದ ಅತ್ಯುನ್ನತ ಹುದ್ದೆಗಳನ್ನು ಅಲಂಕಾರ ಮಾಡುತ್ತಿದ್ದಾರೆ. ಬುಡಕಟ್ಟು ಜನಾಂಗದ ಮಹಿಳೆ ದ್ರೌಪದಿ ಮುರ್ಮು ಅಂತಹವರು ರಾಷ್ಟ್ರಪತಿಯಾಗಿದ್ದಾರೆ ಎಂದರೆ, ಅಂಬೇಡ್ಕರ್ ರಚಿಸಿ ಕೊಟ್ಟಿರುವ ಸಂವಿಧಾನದಿಂದಾಗಿ ಎಂಬುದನ್ನು ನಾವೆಂದಿಗೂ ಮರೆಯಬಾರದು. ಬಾಬಾ ಸಾಹೇಬರ ಸ್ಥೂಲಕಾಯ ನಮ್ಮೊಂದಿಗೆ ಇಲ್ಲವಾದರೂ, ಅವರ ವಿಚಾರ, ತತ್ವ ಮತ್ತು ಆದರ್ಶ ನುಡಿಗಳು ಜೀವಂತವಾಗಿವೆ. ಅವರ ನುಡಿಗಳನ್ನು ಪಾಲಿಸಿದರೆ, ವಿಶ್ವಮಾನವರಾಗಿ ಬದುಕಬಹುದು ತಿಳಿಸಿದರು. ಈ ವೇಳೆ ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು, ಕ್ಷೇತ್ರ ಶಿಕ್ಷಣಾಧಿಕಾರಿ ಸೈಯದ್ ಮೋಸಿನ್, ಮುಖಂಡರಾದ ತುಂಬಿನಕೆರೆ ಬಸವರಾಜ್, ದೇವಿಗೆರೆ ಮಲ್ಲಿಕಾರ್ಜುನ್, ರಾಮಚಂದ್ರಪ್ಪ, ಕೆಂಚಪ್ಪ ನಾಯಕ, ವೆಂಕಟೇಶ್ ದಳವಾಯಿ ಮತ್ತು ಲಕ್ಕಿಹಳ್ಳಿ ಮುದ್ದಪ್ಪ ಸೇರಿದಂತೆ ಹಲವರಿದ್ದರು.

### ಡಿ.9ರಂದು ವೀಕ್ಷಕರ ಆಗಮನ: ಸ್ಥಳೀಯ ಅಭ್ಯರ್ಥಿಗೆ ಅವಕಾಶ ನೀಡಲು ಒತ್ತಾಯ: ಚೌಳೂರು



**ಚಳ್ಳಕೆರೆ:** ಚಿತ್ರದುರ್ಗ ಲೋಕಸಭಾ ಕ್ಷೇತ್ರ ಮೀಸಲಾತಿ ಕ್ಷೇತ್ರವಾದರೂ ಸ್ಥಳೀಯ ಅಭ್ಯರ್ಥಿಗಳಿಗೆ ಸ್ಪರ್ಧಿಸಲು ಅವಕಾಶ ನೀಡದೆ, ಹೊರಗಿನ ಅಭ್ಯರ್ಥಿಗಳನ್ನು ಕಣಕ್ಕೆ ಇಳಿಸುವುದು ಸರಿಯಲ್ಲ. ಕಾಂಗ್ರೆಸ್ ಪಕ್ಷ ಸಾಮಾಜಿಕ ನ್ಯಾಯದ ತಳಹದಿ ಮೇಲೆ ಟಿಕೆಟ್ ಹಂಚಿಕೆ ಮಾಡಬೇಕು, ಸ್ಥಳೀಯ ಅಭ್ಯರ್ಥಿಗೆ ಅವಕಾಶ ಮಾಡಿಕೊಡುವಂತೆ ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚೌಳೂರು ಪ್ರಕಾಶ್ ಕಾಂಗ್ರೆಸ್ ಪಕ್ಷದ ವರಿಷ್ಠರನ್ನು ಆಗ್ರಹಿಸಿದ್ದಾರೆ. ಅವರು, ನಗರದ ಪ್ರವಾಸಿಮಂದಿರದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಸುಮಾರು 8 ಲಕ್ಷ ದಲಿತ ಸಮುದಾಯದ ಮತಗಳಿದ್ದು ಅಪೈಕಿ ಎಡಗೈ ಸಮುದಾಯದ ಐದು ಲಕ್ಷ ಮತಗಳಿವೆ. ಕಳೆದ 2009ರಲ್ಲಿ ಸ್ಥಳೀಯ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಡಾ.ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿ ಈ ಸಮುದಾಯದ ಹೆಚ್ಚು ಮತಗಳನ್ನು ಪಡೆದಿದ್ದರು. ಡಿ.9ರ ಶನಿವಾರ ಲೋಕಸಭಾ ಟಿಕೆಟ್ ಹಂಚಿಕೆ ಕುರಿತಂತೆ ಪಕ್ಷದ ವೀಕ್ಷಕರಾಗಿ ಸಚಿವ ಡಾ.ಎಚ್.ಸಿ.ಮಹದೇವಪ್ಪ ಚಿತ್ರದುರ್ಗಕ್ಕೆ ಆಗಮಿಸಲಿದ್ದು, ಅತಿ ಹೆಚ್ಚು ಜನಪ್ರಿಯತೆ ಹೊಂದಿರುವ ಡಾ.ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿಗೆ ಟಿಕೆಟ್ ನೀಡುವಂತೆ ವೀಕ್ಷಕರಲ್ಲಿ ಮನವಿ ಮಾಡುವುದಾಗಿ ತಿಳಿಸಿದರು.

ಚಿತ್ರದುರ್ಗ ಲೋಕಸಭಾ ಟಿಕೆಟ್ ಆಕಾಂಕ್ಷಿ ಡಾ.ಜೆ.ಜೆ.ಹಟ್ಟಿ ಬಿ.ತಿಪ್ಪೇಸ್ವಾಮಿ ಮಾತನಾಡಿ, ಈ ಬಾರಿ ಚಿತ್ರದುರ್ಗ ಲೋಕಸಭಾ ಕ್ಷೇತ್ರವನ್ನು ಕಾಂಗ್ರೆಸ್ ಪಕ್ಷ ಗೆಲ್ಲಲೇಬೇಕು. ಈಗಾಗಲೇ ಹೊರಗಿನವರಿಗೆ ಟಿಕೆಟ್ ನೀಡಿ ಪಕ್ಷ ಸೋಲು ಅನುಭವಿಸಿದೆ. ಸ್ಥಳೀಯ ಅಭ್ಯರ್ಥಿಗೆ ಅವಕಾಶ ಮಾಡಿಕೊಟ್ಟರೆ ಈ ಕ್ಷೇತ್ರವನ್ನು ಸುಲಭವಾಗಿ ಗೆಲ್ಲಬಹುದಾಗಿದೆ. ಪಕ್ಷದ ಎಲ್ಲಾ ಮುಖಂಡರು, ಕಾರ್ಯಕರ್ತರು ಚುನಾವಣೆಗೆ ಸ್ಪರ್ಧಿಸಲು ನನಗೆ ಒತ್ತಡ ಹೇರುತ್ತಿದ್ದು, ಪಕ್ಷ ಟಿಕೆಟ್ ನೀಡಿದರೆ ಈ ಕ್ಷೇತ್ರವನ್ನು ಹೆಚ್ಚು ಮತಗಳಿಂದ ಗೆಲುವು ಸಾಧಿಸುವ ವಿಶ್ವಾಸ ನನಗಿದೆ ಎಂದರು. ಕಾಂಗ್ರೆಸ್ ಮುಖಂಡ ಎಂ.ಡಿ.ಅಶ್ಪಕ್‌ಅಲಿ, ದಲಿತ ಮುಖಂಡ ಹೆಗ್ಗೆರೆ ಮಂಜುನಾಥ, ಮಾದಿಗ ದಂಡೋರ ಜಿಲ್ಲಾಧ್ಯಕ್ಷ ಬಿ.ತಿಪ್ಪೇಸ್ವಾಮಿ, ಗ್ರಾಪಂ ಸದಸ್ಯ ಬಿ. ಷಣ್ಮುಖಪ್ಪ, ರಾಜಶೇಖರ, ಮಾದಿಗ ಗುತ್ತಿಗೆದಾರರ ಸಂಘದ ಅಧ್ಯಕ್ಷ ಜಗದೀಶ್, ಗೋವಿಂದಪ್ಪ, ಮಾರಪ್ಪ ಉಪಸ್ಥಿತರಿದ್ದರು.

---

**ಪ್ರಮುಖ ಸುದ್ದಿ**

# ಅವಕಾಶ ಬಳಸಿಕೊಂಡು ಉತ್ತಮ ಬದುಕು ರೂಪಿಸಿಕೊಳ್ಳಿ

» **ಚಿತ್ರದುರ್ಗ**

ವಿದ್ಯಾರ್ಥಿಗಳು ಲಭ್ಯವಿರುವ ಅವಕಾಶಗಳನ್ನು ಪರಿಪೂರ್ಣವಾಗಿ ಬಳಸಿಕೊಳ್ಳುವ ಮೂಲಕ ಉತ್ತಮ ಬದುಕು ರೂಪಿಸಿಕೊಂಡು, ಸದೃಢ ಸಮಾಜ ನಿರ್ಮಿಸುವ ಮೂಲಕ ಸಮಾಜಕ್ಕೆ ಸೇವೆ ಸಲ್ಲಿಸಬೇಕು ಎಂದು ಸರ್ಕಾರಿ ಕಲಾ ಕಾಲೇಜು (ಸ್ವಾಯತ್ತ) ಪ್ರಭಾರ ಪ್ರಾಂಶುಪಾಲ ಪ್ರೊ.ಎಲ್.ನಾಗರಾಜಪ್ಪ ಸಲಹೆ ನೀಡಿದರು.

ನಗರದ ಸರ್ಕಾರಿ ಕಲಾ ಕಾಲೇಜಿನ ಐಕ್ಯೂಎಸಿ, ಉದ್ಯೋಗ ಕೌಶಲ್ಯ ಕೋಶ ಮತ್ತು ವಾಣಿಜ್ಯ ನಿರ್ವಹಣಾ ವಿಭಾಗದ ವತಿಯಿಂದ ಬುಧವಾರ "ಆದಾಯ ತೆರಿಗೆ ಇಲಾಖೆ ಪ್ರಾಮುಖ್ಯತೆ ಮತ್ತು ಖಾಸಗಿ ಹಾಗೂ ಸರ್ಕಾರಿ ವಲಯಗಳಲ್ಲಿ ವೃತ್ತಿಯ ಅವಕಾಶಗಳು" ಕುರಿತ ಒಂದು ದಿನದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಪ್ರಸ್ತುತ ದಿನಗಳಲ್ಲಿ ಪ್ರತಿಯೊಂದು ಕ್ಷೇತ್ರದಲ್ಲೂ ಪೈಪೋಟಿ ಇದೆ. ಪರಿಣಿತಿ ಪಡೆದವರಿಗೆ ಹಾಗೂ ಪ್ರತಿಭಾವಂತರಿಗೆ ಉದ್ಯೋಗ ಕ್ಷೇತ್ರದಲ್ಲಿ




ವಿಪುಲ ಅವಕಾಶ ಗಳಿವೆ. ವಿದ್ಯಾರ್ಥಿಗಳು ಅವುಗಳನ್ನು ಬಳಸಿಕೊಳ್ಳಬೇಕು. ಈ ಮೂಲಕ ಪ್ರಗತಿ ಸಾಧಿಸಲು ಪ್ರಯತ್ನಿಸಬೇಕು ಎಂದು ಕಿವಿಮಾತು ಹೇಳಿದರು. ಸಂಪನ್ಮೂಲ ವ್ಯಕ್ತಿ ಆದಾಯ ತೆರಿಗೆ ಇಲಾಖೆ ಅಧಿಕಾರಿ ಸುಬ್ಬರಾಜು, ಆದಾಯ ತೆರಿಗೆ ಇಲಾಖೆ ಹಾಗೂ ಖಾಸಗಿ ಮತ್ತು ಸರ್ಕಾರಿ ವಲಯಗಳಲ್ಲಿ ವಾಣಿಜ್ಯಶಾಸ್ತ್ರ ವಿದ್ಯಾರ್ಥಿಗಳಿಗೆ ಇರುವ ವೃತ್ತಿಯ ಅವಕಾ ಶಗಳ ಕುರಿತು ಉಪನ್ಯಾಸ ನೀಡಿದರು. ಕಾಲೇಜಿನ ಉದ್ಯೋಗ ಕೌಶಲ್ಯ ಕೋಶದ ಮುಖ್ಯಸ್ಥ ಪ್ರೊ.ಹೆಚ್.ಬಸವರಾಜ ಮಾತನಾಡಿ, ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಹೆಚ್ಚು ಆತ್ಮವಿಶ್ವಾಸದಿಂದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಿ, ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಗಳಿಸಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.ಐಕ್ಯೂಎಸಿ ಸಂಚಾಲಕರಾದ ಪ್ರೊ.ಜಿ.ಡಿ.ಸುರೇಶ್ ಮಾತನಾಡಿ, ಕಾಲೇಜಿನಲ್ಲಿ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ವಿದ್ಯಾರ್ಥಿಗಳಿಗೆ ಸ್ವಯಂ ಉದ್ಯೋಗ ಕಂಡುಕೊಳ್ಳಲು ಸಹಾಯಕವಾಗುವುದು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಪತ್ರಾಂಕಿತ ವ್ಯವಸ್ಥಾಪಕ ಮಾರ್ಟಿನ್ ಸ್ಯಾಮುಯೆಲ್, ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ. ಕೆ.ಎಲ್.ಶ್ರೀನಿವಾಸ್, ನಿರ್ವಹಣಾಶಾಸ್ತ್ರ ವಿಭಾಗದ ಮುಖ್ಯಸ್ಥೆ ಪ್ರೊ.ಮೇಘನಾ, ಕನ್ನಡ ವಿಭಾಗದ ಮುಖ್ಯಸ್ಥ ಪ್ರೊ.. ಮಂಜುನಾಥ್ ಸೇರಿದಂತೆ ಕಾಲೇಜಿನ ಅಧ್ಯಾಪಕರು ಇದ್ದರು.

## ಫಾಸ್ಟ್ ನ್ಯೂಸ್

### ಮೃತ ವ್ಯಕ್ತಿ ವಾರಸುದಾರರ ಪತ್ತೆಗೆ ಮನವಿ

» ದಾವಣಗೆರೆ



ತಾಲ್ಲೂಕಿನ ಹದಡಿ ಗ್ರಾಮದಲ್ಲಿ ಓಡಾಡಿಕೊಂಡಿದ್ದ 25 ವರ್ಷ ವಯಸ್ಸಿನ ಮುರುಳಿ ಎಂಬ ಅಪರಿಚಿತ ವ್ಯಕ್ತಿ ನಗರದ ಜಿಲ್ಲಾ ಚಿಗಟೇರಿ ಆಸ್ಪತ್ರೆಯಲ್ಲಿ ನ. 24 ರಂದು ಉಸಿರಾಟ ತೊಂದರೆಯಿಂದ ಮೃತಪಟ್ಟಿದ್ದು, ಮೃತನ ವಾರಸುದಾರರ ಪತ್ತೆಗೆ ಸಹಕರಿಸಲು ಹದಡಿ ಪೊಲೀಸ್ ಠಾಣೆ ಪೊಲೀಸ್ ಉಪನಿರೀಕ್ಷಕರು ಮನವಿಚೆಹರೆ ವಿವರ; 170.0 ಸೆ.ಮಿ ಎತ್ತರ, ಕೋಲು ಮುಖ, ತೆಳ್ಳನೆಯ ಮೈಕಟ್ಟು ಹಾಗೂ ಗೋಧಿ ಬಣ್ಣ ಹೊಂದಿದ್ದು, ಬಿಳಿ ಬಣ್ಣದ ಮತ್ತು ಸಿಮೆಂಟ್ ಬಣ್ಣಗಳ ದಪ್ಪಗೆರೆಗಳಿರುವ ಶರ್ಟ್ ಮತ್ತು ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾರೆ.ಈ ವ್ಯಕ್ತಿಗಳ ಸುಳಿವು ಅಥವಾ ಮಾಹಿತಿ ದೊರೆತಲ್ಲಿ ಹದಡಿ ಪೊಲೀಸ್ ಠಾಣೆ ದೂ. ಸಂ- 08192218405 ದಾವಣಗೆರೆ ಕಂಟ್ರೋಲ್ ರೂಂ. ದೂ. ಸಂ-08192-253100ಗೆ ಕರೆಮಾಡಿ ಮಾಹಿತಿ ನೀಡಲು ತಿಳಿಸಲಾಗಿದೆ.

### ಮಣ್ಣಿಗೆ ಹೆಚ್ಚಾಗಿ ಸಾವಯವ ಗೊಬ್ಬರ ಮತ್ತು ಕೊಟ್ಟಿಗೆ ಗೊಬ್ಬರಗಳನ್ನು ಬಳಸಿದಾಗ ಮಾತ್ರ ಮಣ್ಣಿನ ಫಲವತ್ತತೆಯನ್ನು ಕಾಪಾಡಿಕೊಳ್ಳಬಹುದು



» ಹೊಸದುರ್ಗ

ಮಣ್ಣು ಪರೀಕ್ಷೆ ಮಾಡಿಸಿದಾಗ ಮಾತ್ರ ಮಣ್ಣಿನಲ್ಲಿರುವಂತಹ ಪೋಷಕಾಂಶಗಳ ಅರಿವಾಗುತ್ತದೆ, ಒಂದು ಗಿಡಕ್ಕೆ 17 ಪೋಷಕಾಂಶಗಳ ಅಗತ್ಯವಿರುತ್ತದೆ ಎಂದು ಮಾಡದಕೆರೆ ಕೃಷಿ ಅಧಿಕಾರಿ, ವಿಕಾಸ್ ಜಿ.ಡಿ ತಿಳಿಸಿದರು.

ಪಟ್ಟಣದ ಸಹಾಯಕ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಕೃಷಿ ಇಲಾಖೆ ಹಾಗೂ ತಾಲ್ಲೂಕು ಕೃಷಿಕ ಸಮಾಜ ಹೊಸದುರ್ಗ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ 2023-24ನೇ ಸಾಲಿನ ಆತ್ಮ ಯೋಜನೆಯಡಿ ವಿಶ್ವ ಮಣ್ಣು ದಿನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಮಣ್ಣಿಗೆ ಹೆಚ್ಚಾಗಿ ಸಾವಯವ ಗೊಬ್ಬರ ಮತ್ತು ಕೊಟ್ಟಿಗೆ ಗೊಬ್ಬರಗಳನ್ನು ಬಳಸಿದಾಗ ಮಾತ್ರ ಮಣ್ಣಿನ ಫಲವತ್ತತೆಯನ್ನು ಕಾಪಾಡಿಕೊಳ್ಳಬಹುದು ಎಂದು ತಿಳಿಸಿದರು. ದುರ್ಗದ ಸಿರಿ ರೈತ ಉತ್ಪಾದಕ ಕಂಪನಿ ಸಿ.ಇ.ಓ ಗಿರೀಶ್ ಮಾತನಾಡಿ ಮಣ್ಣು ಎಷ್ಟು ಫಲವತ್ತಾಗಿರುತ್ತದೆಯೋ ಅಷ್ಟು ನಮ್ಮ ದೇಶ ಸಮೃದ್ಧಿಯಾಗಿರುತ್ತದೆ. ಮಣ್ಣಿಗೆ ಯಾವ ಗೊಬ್ಬರದ ಅವಶ್ಯಕತೆ ಇದೆಯೋ ಆ ಗೊಬ್ಬರವನ್ನು ಮಾತ್ರ ಒದಗಿಸಬೇಕು. ಟ್ರೈಕೋಡರ್ಮಾ, ಹಸಿರೆಲೆ ಗೊಬ್ಬರ ಹಾಗೂ ಕೊಟ್ಟಿಗೆ ಗೊಬ್ಬರದ ಬಳಕೆಯಿಂದ ಮಣ್ಣಿನ ಜೀವಾಣು ಹೆಚ್ಚಾಗಿ ಮಣ್ಣು ಫಲವತ್ತಾಗುತ್ತದೆ ಎಂದು ತಿಳಿಸಿದರು

ಸಹಾಯಕ ಕೃಷಿ ನಿರ್ದೇಶಕರಾದ ಸಿ.ಎಸ್ ಈಶ ಮಾತನಾಡಿ ಥೈಲ್ಯಾಂಡ್ ದೇಶದ ರಾಜನಾದ ಹೆಚ್ ಎಂ ಕಿಂಗ್ ಭೂಮಿಬೋಲ್ ಅದುಲ್ಯದೇಜ್ ಇವರ ಜನ್ಮದಿನದ ಅಂಗವಾಗಿ ವಿಶ್ವ ಮಣ್ಣು ದಿನವನ್ನು ಆಚರಿಸಲಾಗುತ್ತದೆ. ಭಾರತ ದೇಶವು ಕೃಷಿ ಪ್ರಧಾನವಾಗಿದ್ದು ಮಣ್ಣಿನ ಆರೋಗ್ಯ ಕಾಪಾಡಿಕೊಳ್ಳಬೇಕು. ಮಣ್ಣಿನ ಸಂರಕ್ಷಣೆಗಾಗಿ ಬದುಗಳನ್ನು ಹಾಕಿಸಿಕೊಳ್ಳಬೇಕು, ಕೃಷಿಹೊಂಡಗಳ ನಿರ್ಮಾಣ ಮಾಡಿಕೊಳ್ಳಬೇಕು, ಹಾಗು ಸಮಗ್ರ ಕೃಷಿ ಪದ್ಧತಿಯನ್ನು ಅಳವಡಿಸಿಕೊಳ್ಳುವುದರಿಂದ ಅಧಿಕ ಆದಾಯ ಪಡೆಯಬಹುದು. ಬರಪರಿಹಾರಕ್ಕಾಗಿ ರೈತರು ತಮ್ಮ ಎಲ್ಲಾ ಪಹಣಿಗಳನ್ನು ತಮ್ಮ ಎಫ್.ಐ.ಡಿ.ಗೆ ಸೇರಿಸಿಕೊಳ್ಳಿ, ಹಾಗೂ ಪಿ.ಎಂ. ಕಿಸಾನ್ ಯೋಜನೆಯ ಫಲಾನುಭವಿಗಳು ಎಲ್ಲರೂ ಈ-ಕೆವೈಸಿ ಮಾಡಿಸಿಕೊಳ್ಳಲು ಹೇಳಿದರು.

ಕಾರ್ಯಕ್ರಮದಲ್ಲಿ ರೈತ ಸಂಘದ ರಘು, ರೈತ ಮಹಿಳೆ ಶ್ರೀಮತಿ ಶೋಭ, ಕೃಷಿ ಅಧಿಕಾರಿ, ಶ್ರೀಮತಿ ಮಣಿಲಾ ಪಿ.ಎಸ್, ರೈತ ಸಂಪರ್ಕ ಕೇಂದ್ರ, ಕಸಬಾ, ದುರ್ಗದ ಸಿರಿಧಾನ್ಯ ಕಂಪನಿ ಕಾರ್ಯನಿರ್ವಹಣಾಧಿಕಾರಿ ಬಿ.ಜಿ ಗಿರೀಶ್, ಕೃಷಿ ಇಲಾಖೆಯ ಆತ್ಮ ಯೋಜನೆಯ ಸಿಬ್ಬಂದಿಗಳಾದ ಸುರೇಶ್, ತುಳಸಿರಾಮು, ಲೋಹಿತ್ ಮತ್ತು ಕವಿತಾ ಹಾಗೂ ಕೃಷಿ ಸಂಜೀವಿನಿ ತಾಂತ್ರಿಕ ಸಹಾಯಕ ಸಂತೋಷ್.ಎ.ಎನ್, ಶಿವಾನಂದ್ ಉಪಸ್ಥಿತರಿದ್ದರು.

# ಎಸ್ಸಿ ಎನ್ನುವ ಕಾರಣಕ್ಕೆ ಆರ್‌ಎಸ್‌ಎಸ್ ಕಚೇರಿ ಪ್ರವೇಶಕ್ಕೆ ನಿರಾಕರಣೆ: ಗೂಳಿಹಟ್ಟಿ ಶೇಖರ್ ಆರೋಪ

## ಗೂಳಿಹಟ್ಟಿ ಶೇಖರ್ ಆರೋಪದಲ್ಲಿ ಹುರುಳಿಲ್ಲವೆಂದು ಆರ್‌ಎಸ್‌ಎಸ್ ಕಾರ್ಯವಾಹ ಸ್ಪಷ್ಟನೆ

» ಹೊಸದುರ್ಗ

ಪರಿಶಿಷ್ಟ ಜಾತಿಗೆ ಸೇರಿದ ವ್ಯಕ್ತಿ ಎಂಬುದು ಖಚಿತವಾಗಿದ್ದರಿಂದ ಮಹಾರಾಷ್ಟ್ರದಲ್ಲಿನ ನಾಗ್ಪುರದ ರಾಷ್ಟ್ರೀಯ ಸ್ವಯಂ ಸೇವಕ ಸಂಘದ (ಆರ್‌ಎಸ್‌ಎಸ್) ಹೆಡಗೇವಾರ್ ವಸ್ತುಸಂಗ್ರಹಾಲಯದ ಪ್ರವೇಶ ನಿರಾಕರಿಸಲಾಗಿದೆ. ಇದಕ್ಕೆ ಕಾರಣ ಏನು ಎಂಬುದನ್ನು ಸ್ಪಷ್ಟಪಡಿಸಬಲ್ಲಿರಾ? ಎಂದು ಬಿಜೆಪಿ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್.ಸಂತೋಷ್ ಅವರನ್ನು ಮಾಜಿ ಸಚಿವ ಗೂಳಿಹಟ್ಟಿ ಡಿ.ಶೇಖರ್ ಪ್ರಶ್ನಿಸಿದ್ದಾರೆ.

ನಾಗಪುರದ ಆರ್‌ಎಸ್‌ಎಸ್ ಕಚೇರಿ ಭೇಟಿಯ ಸಂದರ್ಭದಲ್ಲಿ ಉಂಟಾದ ಕಹಿ ಅನುಭವಕ್ಕೆ ಸಂಬಂಧಿಸಿದ ಹೇಳಿಕೆಯನ್ನು ಆಡಿಯೊ ರೂಪದಲ್ಲಿ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

'ಚುನಾವಣೆಘೋಷಣೆಯಾಗುವುದಕ್ಕೂ ಮೂರು ತಿಂಗಳ ಹಿಂದೆ ಮಹಾರಾಷ್ಟ್ರದ ನಾಗಪುರದ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಕಚೇರಿಗೆ ಭೇಟಿ ನೀಡಿದ್ದೆ. ಪರಿಶಿಷ್ಟ ಜಾತಿಗೆ ಸೇರಿದವನಾದರೂ ಹಿಂದುತ್ವದ ಬಗ್ಗೆ ನನಗೆ ಹೆಮ್ಮೆ ಇದೆ. ನಾನು ಖುಷಿಯಿಂದ ಅಲ್ಲಿಗೆ ತೆರಳಿದ್ದೆ. ಆದರೆ, ಹೆಡಗೇವಾರ್ ವಸ್ತುಸಂಗ್ರಹಾಲಯ ಪ್ರವೇಶದ ಸಂದರ್ಭದಲ್ಲಿ ಕಹಿ ಅನುಭವ ಉಂಟಾಯಿತು' ಎಂದು ಬೇಸರ ಹೊರಹಾಕಿದ್ದಾರೆ.


'ಮ್ಯೂಸಿಯಂ ವೀಕ್ಷಣೆಗೆ ಬರುವವರ ಮಾಹಿತಿಯನ್ನು ಪ್ರವೇಶದ್ವಾರದಲ್ಲಿ ಸಂಗ್ರಹಿಸಲಾಗುತ್ತಿತ್ತು. ಪುಸ್ತಕದಲ್ಲಿ ಹೆಸರು ನೋಂದಾಯಿಸಿ ಒಳಗೆ ಹೆಜ್ಜೆ ಇಡುತ್ತಿದ್ದಾಗ ವ್ಯಕ್ತಿಯೊಬ್ಬರು ತಡೆದರು. ಪರಿಶಿಷ್ಟ ಜಾತಿಗೆ ಸೇರಿದವರಿಗೆ ಪ್ರವೇಶವಿಲ್ಲ ಎಂಬುದನ್ನು ಸ್ಪಷ್ಟಪಡಿಸಿದರು. ನನ್ನೊಂದಿಗೆ ಇದ್ದ ಮೋಹನ್ ವೈದ್ಯ ಹಾಗೂ ಮಂಜು ಎಂಬುವರು ಮಾತ್ರ ಒಳಗೆ ಹೋದರು. ನಾನು ಹೊರಗೆ ಕಾಯುತ್ತ ಕುಳಿತುಕೊಳ್ಳಬೇಕಾಯಿತು' ಎಂದು ಹೇಳಿದ್ದಾರೆ.

'ದೇಶ ಸೇವೆ ಮಾಡುತ್ತಾರೆ ಎಂಬ ಕಾರಣಕ್ಕೆ ಆರ್‌ಎಸ್‌ಎಸ್ ನಾಯಕರ ಮೇಲೆ ಅಪಾರ ಗೌರವವಿತ್ತು. ಮ್ಯೂಸಿಯಂ ಪ್ರವೇಶ ನಿರಾಕರಿಸಿದ್ದು ಮನಸಿಗೆ ಘಾಸಿಯುಂಟು ಮಾಡಿತ್ತು. ರಾಜಕೀಯ ಪಕ್ಷದ ಮುಲಾಜಿಗೆ ಒಳಗಾಗಿ ಬಹಿರಂಗವಾಗಿ ಅಭಿಪ್ರಾಯ ಹಂಚಿಕೊಳ್ಳಲು ಸಾಧ್ಯವಾಗಿರಲಿಲ್ಲ. ಆದರೆ, ಅನೇಕ ಮುಖಂಡರ ಬಳಿ ಖಾಸಗಿಯಾಗಿ ಪ್ರಸ್ತಾಪ ಮಾಡಿದ್ದೆ. ಯಾರೊಬ್ಬರೂ ಸರಿಯಾಗಿ ಸ್ಪಂದಿಸದ ಕಾರಣಕ್ಕೆ ಬಹಿರಂಗಪಡಿಸಿದ್ದು, ನನ್ನ ಹೇಳಿಕೆಗೆ ಬದ್ಧವಾಗಿದ್ದೇನೆ. ಇದು ನನ್ನ ಕಹಿ ಅನುಭವ. ಚಿತ್ರದುರ್ಗ ಲೋಕಸಭಾ ಕ್ಷೇತ್ರದಿಂದ ಪರಿಶಿಷ್ಟ ಜಾತಿಗೆ ಸೇರಿದ ಎ. ನಾರಾಯಣಸ್ವಾಮಿ ಅವರನ್ನು ಆಯ್ಕೆ ಮಾಡಲಾಗಿದೆ. ನಾರಾಯಣಸ್ವಾಮಿ ಹಾಗೂ ಮಾಜಿ ಸಚಿವ ಗೋವಿಂದ ಕಾರಜೋಳ ಅವರು ಇಲ್ಲಿಗೆ ಪ್ರವೇಶ ಪಡೆದಿದ್ದಾರೆ ಎಂಬ ಅನುಮಾನವಿದೆ. ನನ್ನನ್ನು ಒಳಗೆ ಬಿಡದಿರುವ ಬಗ್ಗೆ ಬಿ.ಎಲ್. ಸಂತೋಷ್ ಅವರೇ ಸ್ಪಷ್ಟನೆ ನೀಡ ಬಲ್ಲಿರಾ ' ಎಂದು ಪ್ರಶ್ನಿಸಿದ್ದಾರೆ.



### ಗೂಳಿಹಟ್ಟಿ ಶೇಖರ್ ಅವರದು ಹುರುಳಿಲ್ಲದ ಆರೋಪ

ನಾನು ಪರಿಶಿಷ್ಟ ಜಾತಿಗೆ ಸೇರಿದವನು ಎಂಬ ಕಾರಣಕ್ಕಾಗಿ ನನಗೆ ಆರ್ ಎಸ್ ಎಸ್ ಕಚೇರಿ ಪ್ರವೇಶಕ್ಕೆ ನಿರಾಕರಣೆ ಮಾಡಲಾಗಿತ್ತು' ಎಂಬ ಗೂಳಿಹಟ್ಟಿ ಶೇಖರ್ ಆರೋಪಕ್ಕೆ ರಾಷ್ಟ್ರೀಯ ಸ್ವಯಂಸೇವಕ ಸಂಘದ ದಕ್ಷಿಣ ಮಧ್ಯ ಕ್ಷೇತ್ರೀಯ ಕಾರ್ಯವಾಹ ನಾ. ತಿಪ್ಪೇಸ್ವಾಮಿ ಎಂಬುವರು ಬುಧವಾರ ಪತ್ರಿಕಾ ಪ್ರಕಟಣೆ ಹೊರಡಿಸಿದ್ದು, ಹೊಸದುರ್ಗದ ಮಾಜಿ ಶಾಸಕರಾದ ಗೂಳಿಹಟ್ಟಿ ಶೇಖರ್ ಅವರ ಆಡಿಯೋ ಹೇಳಿಕೆಯಲ್ಲಿ ತಮಗೆ ಜಾತಿಯ ಕಾರಣಕ್ಕೆ ನಾಗಪುರದ ಡಾ. ಹೆಡಗೇವಾರ್ ಸ್ಮಾರಕ ಕಟ್ಟಡದಲ್ಲಿ ಪ್ರವೇಶ ನಿರಾಕರಿಸಲಾಯಿತು ಎಂದು ಆರೋಪಿಸಿದ್ದಾರೆ. ನಾಗಪುರದಲ್ಲಿ ಸಂಘ ಕಾರ್ಯಾಲಯವನ್ನು ನೋಡಲು ಬಂದವರ ಹೆಸರನ್ನು ನೊಂದಾಯಿಸಿ ಪ್ರವೇಶ ನೀಡುವ ವ್ಯವಸ್ಥೆ ಇಲ್ಲ. ಇದೊಂದು ನಿರಾಧಾರದ ಹಾಗೂ ಉರುಳಿದ ಆರೋಪ. ಸಂಘದ ಯಾವುದೇ ಕಚೇರಿಯಲ್ಲಾಗಲಿ, ಅಥವಾ ಈ ರೀತಿ ಸ್ಮಾರಕ ಕಟ್ಟಡಗಳಾಗಲಿ, ಎಲ್ಲರಿಗೂ ಮುಕ್ತ ಪ್ರವೇಶವಿದೆ.



ರಾಷ್ಟ್ರೀಯ ಸ್ವಯಂಸೇವಕ ಸಂಘ, ಕರ್ನಾಟಕ
#74, ರಂಗರಾವ್ ರಸ್ತೆ, ಶಂಕರಪುರಂ, ಬೆಂಗಳೂರು. 560004
ದಿನಾಂಕ: 06.12.2023

ಪತ್ರಿಕಾ ಪ್ರಕಟಣೆ

ರಾಷ್ಟ್ರೀಯ ಸ್ವಯಂಸೇವಕ ಸಂಘವು ಎಲ್ಲರನ್ನೂ ಸದಾ ತೆರೆದ ಮನಸ್ಸಿನಿಂದ ಸ್ವಾಗತಿಸುತ್ತದೆ.

ನಾ. ತಿಪ್ಪೇಸ್ವಾಮಿ

ಎಲ್ಲಾ ಜಾತಿ, ವರ್ಗದ ಸಾವಿರಾರು ಜನರು ಇಲ್ಲಿಗೆ ನಿತ್ಯವೂ ಬಂದು ಹೋಗುತ್ತಲೇ ಇರುತ್ತಾರೆ. ಯಾರಿಗೂ ಪ್ರವೇಶ ನಿರಾಕರಣೆಗೆ ಪ್ರಶ್ನೆಯೇ ಬಂದಿಲ್ಲ. ಇಷ್ಟಾಗಿ ರಾಜ್ಯ ವಿಧಾನಸಭಾ ಚುನಾವಣೆಗೆ 4 ತಿಂಗಳು ಮೊದಲು ಈ ಘಟನೆ ನಡೆದಿತ್ತು ಎನ್ನುವ ಗೂಳಿಹಟ್ಟಿ ಶೇಖರ್ ಆನಂತರ ಅನೇಕ ಸಂಘದ ಪ್ರಮುಖರನ್ನು ಭೇಟಿಯಾದರೂ, ಎಲ್ಲಿಯೂ ತಮಗಾದ ಅವಮಾನದ ಬಗ್ಗೆ ಹೇಳಿರಲಿಲ್ಲ. ಈಗ 10 ತಿಂಗಳ ನಂತರ ಈ ರೀತಿ ಹೇಳಿಕೆ ನೀಡಿರುವುದು ಆಶ್ಚರ್ಯಕರವಾಗಿದೆ. ಸಂಘವು ಎಲ್ಲರನ್ನೂ ಸದಾ ತೆರದ ಮನಸ್ಸಿನಿಂದ ಸ್ವಾಗತಿಸುತ್ತದೆ' ಎಂದು ಗೂಳಿಹಟ್ಟಿ ಶೇಖರ್ ಆರೋಪಕ್ಕೆ ಪ್ರತಿಕ್ರಿಯೆ ನೀಡಿದ್ದಾರೆ.

# ಡಾ.ಬಿ.ಆರ್.ಅಂಬೇಡ್ಕರ್‌ರವರ ಚಿಂತನೆಗಳು ದಲಿತ ಸಮುದಾಯದ ಪ್ರಗತಿಯ ಹೆಜ್ಜೆಗೆ ನಾಂದಿಯಾಗಿವೆ

» ಚಳ್ಳಕೆರೆ

ಅಂಬೇಡ್ಕರ್‌ರವರ ಪರಿನಿಬ್ಬಾಣ ಶೋಷಿತ ಸಮಾಜ ಕತ್ತಲೆಯಿಂದ ಬೆಳಕಿನತ್ತ ಹೆಜ್ಜೆ ಇಡುವ ಗುರಿಹೊಂದಿದೆ ಎಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ, ಕಾಂಗ್ರೆಸ್ ಮುಖಂಡ ಬಿ.ಪಿ.ಪ್ರಕಾಶ್‌ಮೂರ್ತಿ ತಿಳಿಸಿದರು.

ಅವರು, ನಗರದ ಅಂಬೇಡ್ಕರ್ ವೃತ್ತದಲ್ಲಿ ಬುಧವಾರ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರ 67ನೇ ಪರಿನಿಬ್ಬಾಣ ದಿನಾಚರಣೆಯನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಅಂಬೇಡ್ಕರ್‌ರವರ ಸಾಗಿಬಂದ ಹಾದಿಯ ಬಗ್ಗೆ ಪ್ರತಿಯೊಬ್ಬರೂ ಚಿಂತನೆ ಮಾಡಬೇಕಿದೆ. ತಮ್ಮ ವಿದ್ಯಾಭ್ಯಾಸದ ಅವಧಿಯಲ್ಲೇ ಹೆಜ್ಜೆ, ಹೆಜ್ಜೆಗೂ ತೊಂದರೆಯನ್ನು ನಿವಾರಿಸಿಕೊಂಡು ಶಿಕ್ಷಣವನ್ನು ಮುಗಿಸಿದವರು. ಹಲವಾರು ಎಡರುತೊಡರುಗಳ ನಡುವೆಯೂ ಶೋಷಿತ ಸಮುದಾಯಕ್ಕೆ ಶಕ್ತಿ ತುಂಬುವ ನಿಟ್ಟಿನಲ್ಲಿ ಸಂವಿಧಾನ ಚೌಕಟ್ಟಿನಲ್ಲಿ ಶೋಷಣೆಯಿಂದ ಮುಕ್ತಗೊಳಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಿದವರು ಎಂದರು.



ಪ್ರಾಸ್ತಾವಿಕವಾಗಿ ಮಾತನಾಡಿದ ದಲಿತ ಸಂಘಟನೆಗಳ ಮುಖಂಡ ಟಿ.ವಿಜಯಕುಮಾರ್, ಡಾ.ಬಿ.ಆರ್.ಅಂಬೇಡ್ಕರ್‌ರವರ 67ನೇ ಪರಿನಿಬ್ಬಾಣ ದಿನಾಚರಣೆ ಶೋಷಿತ ಸಮುದಾಯ ತಮ್ಮ ಹಕ್ಕುಗಳಿಗಾಗಿ ಸಂಘಟಿತರಾಗಿ ಹೋರಾಟಲು ಇಂತಹ ವೇದಿಕೆಯನ್ನು ಸದುಪಯೋಗ ಪಡಿಸಿಕೊಳ್ಳಬೇಕು. ಕಳೆದ ಹಲವಾರು ದಶಕಗಳಿಂದ ಶೋಷಣೆಯಲ್ಲೇ ಮುಳುಗಿರುವ ದಲಿತ ಸಮುದಾಯವನ್ನು ಬೆಳಕಿನತ್ತ ಕೊಂಡ್ಯೊಯುವ ಏಕೈಕ ಶಕ್ತಿ ಎಂದರೆ ಅಂಬೇಡ್ಕರ್ ಎಂದರು. ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿ ಪೌರಾಯುಕ್ತ ಸಿ.ಚಂದ್ರಪ್ಪ, ವಿದ್ಯಾರ್ಥಿ ದೆಸೆಯಿಂದಲೇ ಅಂಬೇಡ್ಕರ್ ಹೋರಾಟದ ಕಿಚ್ಚನ್ನು ರೂಡಿಸಿಕೊಂಡವರು. ಯಾವುದೇ ಸಂದರ್ಭದಲ್ಲೂ ರಾಜಿಯಾಗದೆ ತಮ್ಮ ವಾದವನ್ನು ಮಂಡಿಸಿ ಎಲ್ಲರಿಂದಲೂ ಶಬಾಷ್‌ಗಿರಿ ಪಡೆಯುತ್ತಿದ್ದರು. ತಮ್ಮ ಬದುಕಿನುದ್ದಕ್ಕೂ ಶೋಷಣೆ ಮುಕ್ತ ಸಮಾಜ ಕಾಣಬೇಕೆಂಬ ಕನಸುಕಂಡ ಮಹಾನೀಯರು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಕೆಡಿಪಿ ನಾಮಿನಿಸದಸ್ಯಓ.ರಂಗಸ್ವಾಮಿ,ಇಒಎಚ್.ಶಶಿಧರ, ಸಮಾಜ ಕಲ್ಯಾಣಾಧಿಕಾರಿ ಮಂಜಪ್ಪ, ಡಿವೈಎಸ್ಪಿ ರಾಜಣ್ಣ, ಬಿಇಒ ಕೆ.ಎಸ್.ಸುರೇಶ್, ಬಿಸಿಎಂ ಅಧಿಕಾರಿ ದಿವಾಕರ್, ಪರಿಶಿಷ್ಟ ಕಲ್ಯಾಣಾಧಿಕಾರಿ ಶಿವರಾಜು, ಕೆ.ವೀರಭದ್ರಪ್ಪ, ಚೌಳೂರು ಪ್ರಕಾಶ್, ದ್ಯಾವರನಹಳ್ಳಿ ತಿಪ್ಪೇಸ್ವಾಮಿ, ಚಂದ್ರು, ವಿನೋದ್, ಮೈತ್ರಿದ್ಯಾಮಣ್ಣ ಉಪಸ್ಥಿತರಿದ್ದರು.

# ನಿಜಲಿಂಗಪ್ಪನವರ ಸವಿನೆನಪಿನ ಮೂರು ದಿನಗಳ ಕಾಲ ಸ್ಮರಣೆ

» ಹೊಸದುರ್ಗ

ನಮ್ಮ ಶಿಕ್ಷಣ ಸಂಸ್ಥೆ ಕಳೆದ ವರ್ಷಗಳಿಂದ ಪ್ರಾಮಾಣಿಕವಾಗಿ ಕಾರ್ಯ ನಿರ್ವಹಿಸುತ್ತಾ ಬಂದಿದೆ ಶಿಕ್ಷಣವನ್ನು ನೀಡುವುದರ ಮೂಲಕ ಹೊಸ ಆಯಾಮವನ್ನು ಸೃಷ್ಟಿಸಿದೆ ಶಿಕ್ಷಣ ಸಂಸ್ಥೆಗೆ ಎಸ್ ನಿಜಲಿಂಗಪ್ಪನವರ ನಾಮಕರಣ ಮಾಡಿದ್ದು ಅವರ ಪ್ರಾಮಾಣಿಕತೆ ಅವರ ನಿಷ್ಠೆ ನಾಡಿಗೆ ಮಾದರಿಯಾಗಿದೆ ಎಂದು ಎಸ್.ನಿಜಲಿಂಗಪ್ಪ ಎಜುಕೇಷನ್ ಅಂಡ್ ರೂರಲ್ ಡೆವಲಪ್‌ಮೆಂಟ್ ಟ್ರಸ್ಟ್‌ನ ಕಾರ್ಯದರ್ಶಿ ಕೆ.ಎಸ್ ಕಲ್ಮಠ್ ತಿಳಿಸಿದರು.

ಪಟ್ಟಣದ ಎಸ್ ನಿಜಲಿಂಗಪ್ಪ ವಿದ್ಯಾ ಸಂಸ್ಥೆಯಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು ಎಸ್.ನಿಜಲಿಂಗಪ್ಪನವರ ಆದರ್ಶಗಳನ್ನು ಇಟ್ಟುಕೊಂಡು ಜೀವನವನ್ನು ಸಾಗಿಸಬೇಕಾಗಿದೆ ಅವರ ಹುಟ್ಟು ಹಬ್ಬವನ್ನು ವಿಶೇಷವಾಗಿ ಆಚರಿಸುವ ನಿಟ್ಟಿನಲ್ಲಿ ಇದೇ ಡಿಸೆಂಬರ್ 9 ರಿಂದ 11 ಮೂರು ದಿನಗಳ ಕಾಲ ಅವರ ಸವಿನೆನಪಿನ ಸ್ಮರಣೆಯನ್ನು ಮಾಡಬೇಕಾಗಿದೆ ಎಂದು ತಿಳಿಸಿದರು.

ಡಿಸೆಂಬರ್ 9 ರಂದು ನೊಣವಿನಕೆರೆ ಗ್ರಾಮದ ಶ್ರೀಗಳಾದ ಕರಿಶುಭ ದೇಶಿ ಕೇಂದ್ರದ ಸ್ವಾಮೀಜಿ ಅವರು ಆಗಮಿಸಿ ಇಷ್ಟು ಲಿಂಗ ಪೂಜೆ ನೆರವೇರಿಸಲಿದ್ದಾರೆ. ನಮ್ಮಲ್ಲಿರುವಂತಹ ವಿದ್ಯಾರ್ಥಿಗಳು ಉನ್ನತ ಮಠದ ವ್ಯಾಸಂಗಕ್ಕಾಗಿ ಬೆಂಗಳೂರು ದಾವಣಗೆರೆ ತುಮಕೂರು ದಕ್ಷಿಣ ಕನ್ನಡ ಕೊಡಗು ಮಂಗಳೂರು ಧಾರವಾಡ ಹೀಗೆ ಅನೇಕ ಜಿಲ್ಲೆಗಳಿಗೆ ಹೋಗುತ್ತಿದ್ದಾರೆ ಇದರಿಂದ ಗ್ರಾಮೀಣ ಪ್ರದೇಶದ ಮಕ್ಕಳಲ್ಲಿ ಆರ್ಥಿಕ ಸಮಸ್ಯೆ ಹೆದರಿಸುತ್ತಿದ್ದಾರೆ ಆ ಒಂದು ನಿಟ್ಟಿನಲ್ಲಿ ನಮ್ಮ ಸಂಸ್ಥೆ ವತಿಯಿಂದಲೇ ಸಿಇಟಿ ನೀಟ್ ಪರೀಕ್ಷೆಗಳ ಬಗ್ಗೆ ವಿಶೇಷ ತರಬೇತಿ ನೀಡಿ ಗ್ರಾಮೀಣ ಪ್ರದೇಶದ ಮಕ್ಕಳಿಗೆ ನೀಡಬೇಕು ಎಂದರು.

ಪ್ರಸ್ತುತ ದಿನಮಾನಗಳಿಂದ ಡಿಜಿಟಲ್ ಮಾದರಿಯ ಶಿಕ್ಷಣ ವ್ಯವಸ್ಥೆಯನ್ನು ನಮ್ಮ ಸಂಸ್ಥೆಯಲ್ಲಿ ನೀಡಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ರಾಜ್ಯಸಭಾ ಸದಸ್ಯರಾದ ಎಚ್.ಹನುಮಂತಪ್ಪ ವೀರಶೈವ ಮುಖಂಡರಾದ ಷಣ್ಮುಖಪ್ಪ. ಜಿಲ್ಲೆಯ ಪ್ರಮುಖ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದಂತಹ ಗಣ್ಯ ವ್ಯಕ್ತಿಗಳಿಗೆ ಸನ್ಮಾನವನ್ನು ಮಾಡಲಾಗುವುದು ಎಂದು ಮಾಹಿತಿ ನೀಡಿದ ಅವರು ಡಿಸೆಂಬರ್ 10 ರಂದು ಶ್ರೀ ರಾಮಕೃಷ್ಣ ಆಶ್ರಮ ಪಾವಗಡದ ಶ್ರೀ ಸ್ವಾಮಿ ಜಪಾನಂದಜಿ ಅವರು ಆಗಮಿಸಿ ವಿಶೇಷ ಪ್ರವಚನ ನೀಡಲಿದ್ದಾರೆ ಎಂದು ತಿಳಿಸಿದರು. ಮೂರು ದಿನಗಳೂ ಕೂಡ ಸಂಜೆ ಶಾಲಾ ಮತ್ತು ಕಾಲೇಜು ಮಕ್ಕಳಿಂದ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮವನ್ನ ಆಯೋಜಿಸಲಾಗಿದೆ ಎಂದರು.ಈ ಸಂಧರ್ಬದಲ್ಲಿ ಕಾಲೇಜಿನ ಅಕಾಡಮಿ ಡೈರೆಕ್ಟರ್ ಎಂ.ಬಿ.ತಿಪ್ಪೇಸ್ವಾಮಿ ಉಪಸ್ಥಿತರಿದ್ದರು.

### ಡಿ.11ರಂದು ಜಿಲ್ಲಾ ಮಟ್ಟದ ರಾಷ್ಟ್ರೀಯ ಶಿಶಿಕ್ಷು ಮೇಳ

» ದಾವಣಗೆರೆ

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ವತಿಯಿಂದ ಡಿ.11 ರಂದು ಚನ್ನಗಿರಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಜಿಲ್ಲಾ ಮಟ್ಟದ ರಾಷ್ಟ್ರೀಯ ಶಿಶಿಕ್ಷು ಮೇಳವನ್ನು ಆಯೋಜಿಸಲಾಗಿದೆ. ಐ.ಟಿ.ಐ, ಡಿಪ್ಲೋಮಾ ಪೂರೈಸಿದ ನಿರುದ್ಯೋಗಿ ಯುವಕ, ಯುವತಿಯರು ಹಾಗೂ ಅಂತಿಮ ವರ್ಷದ ವಿದ್ಯಾರ್ಥಿಗಳು ಸಹ ಮೇಳದಲ್ಲಿ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ದೂ.9844710844, 9901602345 ಹಾಗೂ 9902908395ಗೆ ಸಂಪರ್ಕಿಸಬಹುದೆಂದು ತರಬೇತಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## ಪ್ರಮುಖ ಸುದ್ದಿ

# ಅಂಬೇಡ್ಕರ್ ಸಿದ್ಧಾಂತಗಳು ಇಡೀ ವಿಶ್ವಕ್ಕೆ ಮಾದರಿ: ವೆಂಕಟೇಶ್

» ದಾವಣಗೆರೆ

ಡಾ. ಬಿ.ಆರ್.ಅಂಬೇಡ್ಕರ್‌ರವರು ಹಾಕಿಕೊಟ್ಟಂತಹ ಸಂವಿಧಾನ ಮತ್ತು ತತ್ವ ಸಿದ್ಧಾಂತಗಳು ಕೇವಲ ಒಂದು ದೇಶಕ್ಕೆ ಸೀಮಿತವಾಗದೇ ಇಡೀ ವಿಶ್ವಕ್ಕೆ ಮಾದರಿಯಗಿರುವಂತಹದ್ದು ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದರು.

ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಡಾ. ಬಿ.ಆರ್ ಅಂಬೇಡ್ಕರ್ ರವರ 67ನೇ ಮಹಾಪರಿನಿರ್ವಾಣ ದಿನಾಚರಣೆ ಅಂಗವಾಗಿ ಡಾ.ಬಿ.ಆರ್ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು. ಡಾ.ಬಿ.ಆರ್ ಅಂಬೇಡ್ಕರ್ ಅವರು ನಮ್ಮ ದೇಶ ಕಂಡ ಮಹಾನ್ ಸಾಮಾಜಿಕ ಪರಿವರ್ತಕ, ಆರ್ಥಿಕ ಶಾಸ್ತ್ರಜ್ಞರಾಗಿದ್ದು, ಅವರು ರಚಿಸಿದಂತಹ ಸಂವಿಧಾನದಿಂದ ರಾಜಕೀಯ, ಸಾಮಾಜಿಕ ಸ್ವಾತಂತ್ರ್ಯವನ್ನು ಹೊಂದಲು ಸಾಧ್ಯವಾಗಿದೆ ಎಂದರು.



ಅಂಬೇಡ್ಕರ್‌ರವರು ಚಿಕ್ಕ ವಯಸ್ಸಿನಲ್ಲಿಯೇ ಶ್ರೇಣೀಕೃತ ಸಮಾಜದಲ್ಲಿ ಅನುಭವಿಸಿದ ಸಂಕಷ್ಟ, ಶೋಷಣೆ ಹಾಗೂ ಮೌಢ್ಯಗಳ ವ್ಯವಸ್ಥೆಯನ್ನು ಸಾಮಾಜಿಕವಾಗಿ ಬದಲಾವಣೆ ಮಾಡಬೇಕು ಮತ್ತು ಸಮಾಜದ ಕಟ್ಟಕಡೆಯ ಸಮುದಾಯವಾಗಿ ಜೀವನ ನಡೆಸುತ್ತಿದ್ದ ದಲಿತರಿಗೂ ಸಹ ಪರಿಪೂರ್ಣವಾದಂತಹ ಜೀವನ ಅವಕಾಶವನ್ನು ಒದಗಿಸಿಕೊಡಲು ಹಗಲು ರಾತ್ರಿ ಕಷ್ಟಪಟ್ಟು ಭಾರತಕ್ಕೆ ವಿಶಾಲವಾದಂತಹ ಸಂವಿಧಾನವನ್ನು ರಚಿಸಿ ಕೊಟ್ಟರು.

ಈ ಸಂವಿಧಾನದಲ್ಲಿ ಬಸವ ತತ್ವವಿದೆ, ಕೀರ್ತನಕಾರರ ಎಲ್ಲಾ ರೀತಿಯ ವಿಚಾರಧಾರೆಗಳೂ ಅಡಕವಾಗಿದೆ. ಹಾಗೆಯೇ ಪ್ರತಿಯೊಬ್ಬರಿಗೂ ಕಾನೂನಿನಲ್ಲಿ ಸಮಾನ ಅವಕಾಶ ನೀಡಿದ್ದು, ಈ ಅವಕಾಶದಿಂದಲೇ ಇಂದು ಒಬ್ಬ ಮಹಿಳೆ ದೇಶದ ರಾಷ್ಟ್ರಪತಿಯಾಗಲು ಸಾಧ್ಯವಾಗಿದೆ ಎಂದರು.ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿ.ಪಂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಸುರೇಶ್.ಬಿ.ಇಟ್ನಾಳ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ನಾಗರಾಜ್. ಕೆ, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ದಲಿತ ಮುಖಂಡರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T